ಸಂಪುಟ : 11 ಸಂಚಿಕೆ: 73 ಪುಟ : 4+2 ಬೆಲೆ: 3.00 ರವಿವಾರ ಎಪ್ರಿಲ್ 19 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 73 Pages : 4+2 Price : 3.00 Sunday April 19 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಎ.22ರಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಈ ವರ್ಷ ಮೇ 1, 2026 ರಂದು ನಡೆಯಲಿರುವ ಗೌತಮ ಬುದ್ಧ ಜಯಂತಿ ಕಾರ್ಯಕ್ರಮದ ನಿಮಿತ್ತ ಎಪ್ರಿಲ್ 22 ರಂದು ಪೂರ್ವಭಾವಿ ಸಭೆಯನ್ನು ಆಯೋಜಿಸಲಾಗಿದೆ.

ಅಂದು ಬುಧವಾರ ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಕಾರ್ಯಕ್ರಮದ ಸಮರ್ಪಕ ಆಯೋಜನೆಗಾಗಿ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಲಿದ್ದಾರೆ.

ಸಭೆಗೆ ಸಂಬಂಧಿಸಿದಂತೆ ಸಲಹೆ ಹಾಗೂ ಅಭಿಪ್ರಾಯಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ಬಸವೇಶ್ವರ ಜಯಂತಿ

■ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 20 ರಂದು ಸೋಮವಾರ ಬಸವೇಶ್ವರ ಜಯಂತಿ ಕಾರ್ಯಕ್ರಮವನ್ನು ಜಿಲ್ಲೆಯಾದ್ಯಂತ ವೈಭವದಿಂದ ಆಚರಿಸಲಾಗುತ್ತಿದೆ.



ಜಯಂತಿ ಪ್ರಯುಕ್ತ ಬೆಳಿಗ್ಗೆ 8.00 ಗಂಟೆಗೆ ಶ್ರೀ ಜಗದ್ಗುರು ತೆ-ೂಂಟದಾರ್ಯ ಸಂಸ್ಥಾನ ಮಠದಿಂದ ಮೆರವಣಿಗೆ ಕಾರ್ಯಕ್ರಮ ಜರುಗಲಿದ್ದು, ರಾಜ್ಯದ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ. ಪಾಟೀಲ ಸೇರಿದಂತೆ ಗಣ್ಯರು ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ. ಈ ಸಂದರ್ಭದಲ್ಲಿ ತ್ರಿವಿಧ ದಾಸೋಹಿ ಪೂಜ್ಯ ಶ್ರೀಮನ್ನಿರಂಜನ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠ, ಗದಗ ಹಾಗೂ ವಿವಿಧ ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಮೆರವಣಿಗೆ ಟಾಂಗಾಕೂಟ ಮಾರ್ಗವಾಗಿ, ಶ್ರೀ ಬಸವೇಶ್ವರ ವೃತ್ತ, ಕೆ.ಎಚ್. ಪಾಟೀಲ ವೃತ್ತ, ರೋಟರಿ ವೃತ್ತ, ಗಾಂಧೀ ವೃತ್ತ ಮಾರ್ಗವಾಗಿ ಶ್ರೀ ಜಗದ್ಗುರು ತೋಂಟದಾರ್ಯ ಮಠವನ್ನು ತಲುಪಲಿದೆ.

ನಂತರ ಬೆಳಿಗ್ಗೆ 11.00 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಜಯಂತಿ ಅಂಗವಾಗಿ ವೇದಿಕೆ ಕಾರ್ಯಕ್ರಮ ಜರುಗಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುರುಬ ಸಮುದಾಯಕ್ಕೆ ಅವಮಾನ: ಸಿ.ಸಿ. ಪಾಟೀಲ ವಿರುದ್ಧ ಹಾಲುಮತ ಮಹಾಸಭಾ ಕಿಡಿ

# ಶಾಸಕ ಸ್ಥಾನದಿಂದ ವಜಾಗೊಳಿಸಲು ಆಗ್ರಹ




■ವಿಜಯಸಾಕ್ಷಿ ಸುದ್ದಿ, ಗದಗ

ಬಾಗಲಕೋಟೆ ಉಪ ಚುನಾವಣೆಯ ವೇಳೆ ಅಲ್ಪಸಂಖ್ಯಾತರು ಹಾಗೂ ಕುರುಬ ಸಮುದಾಯದ ಬಗ್ಗೆ ಅವಮಾನಕಾರಿ ಹೇಳಿಕೆ ನೀಡಿರುವ ಹಿನ್ನೆಲೆಯಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ ಅವರನ್ನು ಶಾಸಕ ಸ್ಥಾನದಿಂದ ವಜಾಗೊಳಿಸಬೇಕು ಎಂದು ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಗಣನೀಯ ಸಂಖ್ಯೆಯಲ್ಲಿ ಇರುವ ಕುರುಬ ಸಮುದಾಯಕ್ಕೆ ರಾಜಕೀಯ ಪ್ರತಿನಿಧಿತ್ವ ಕಡಿಮೆಯಿರುವುದರ ಜೊತೆಗೆ ಇಂತಹ ಹೇಳಿಕೆಗಳು ನೋವುಂಟು ಮಾಡುತ್ತಿವೆ ಎಂದು ಹೇಳಿದರು.

> "ಕುರುಬ ಸಮುದಾಯವನ್ನು ದೂರವಿಡಬೇಕು ಎನ್ನುವ ಹೇಳಿಕೆ ಅಖಂಡ ಸಮುದಾಯಕ್ಕೆ ಅವಮಾನ. ಸಂವಿಧಾನದ ಪ್ರಮಾಣ ವಚನ ಉಲ್ಲಂಘಿಸಿರುವವರನ್ನು ತಕ್ಷಣವೇ ವಜಾಗೊಳಿಸಬೇಕು."
> **– ರುದ್ರಣ್ಣ ಗುಳಗುಳಿ, ರಾಜ್ಯಾಧ್ಯಕ್ಷರು,** ಹಾಲುಮತ ಮಹಾಸಭಾ.

ಹಿಂದಿನ ಸರ್ಕಾರ ಕುರುಬ ಸಮುದಾಯವನ್ನು ಎಸ್ಟಿ ಪಟ್ಟಿಗೆ ಸೇರಿಸಲು ಶಿಫಾರಸು ಮಾಡಿದ್ದರೂ, ಅದೇ ಪಕ್ಷದ ಶಾಸಕರು ಇಂತಹ ಹೇಳಿಕೆ ನೀಡಿರುವುದು ವಿಷಾದನೀಯ ಎಂದು ಟೀಕಿಸಿದರು.

ಶಾಸಕರ ನಡೆಗಳಿಂದ ಪಕ್ಷಕ್ಕೂ ಧಕ್ಕೆ ಉಂಟಾಗುತ್ತಿದ್ದು, ಪಕ್ಷದ ನಾಯಕರೇ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬಸವರಾಜ ನೀಲಗಾರ, ರಾಮಣ್ಣ ಹೂವಣ್ಣನವರ, ಉಮಾ ದ್ಯಾವನೂರ, ರಘು, ಸೋಮನಗೌಡ ಪಾಟೀಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಹಗರಿಬೊಮ್ಮನಹಳ್ಳಿಯಲ್ಲಿ 41 ಡಿಗ್ರಿ ಉಷ್ಣಾಂಶ; ತಂಪು ಪಾನೀಯ ಅಂಗಡಿಗಳಲ್ಲಿ ಜನವೋ ಜನ!

# ಬಿಸಿಲಿನ ತಾಪಕ್ಕೆ ತಂಪು ಪಾನೀಯಗಳಿಗೆ ಬೇಡಿಕೆ ಹೆಚ್ಚಳ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದಲ್ಲಿ ಉಷ್ಣಾಂಶ 41 ಡಿಗ್ರಿ ತಲುಪಿರುವ ಹಿನ್ನೆಲೆಯಲ್ಲಿ ಬಿಸಿಲಿನ ತಾಪ ತೀವ್ರಗೊಂಡಿದ್ದು, ಜನರು ತಂಪು ಪಾನೀಯಗಳತ್ತ ಮುಖ ಮಾಡುತ್ತಿದ್ದಾರೆ. ಮಧ್ಯಾಹ್ನ ವೇಳೆಯಲ್ಲಿ ರಸ್ತೆಗಳು ಬಹುತೇಕ ಖಾಲಿಯಾಗಿದ್ದು, ಸಂಜೆ ವೇಳೆಗೆ ತಂಪು ಹಣ್ಣು ಮತ್ತು ಪಾನೀಯ ಅಂಗಡಿಗಳಲ್ಲಿ ಜನಸಂದಣಿ ಹೆಚ್ಚಾಗಿದೆ.

> "ಬೇಸಿಗೆಯಲ್ಲಿ ಕಲ್ಲಂಗಡಿ ಹಣ್ಣಿಗೆ ಸದಾ ಹೆಚ್ಚಿನ ಬೇಡಿಕೆ ಇರುತ್ತದೆ. ಇತರೆ ಹಣ್ಣುಗಳಿಗಿಂತ ತಂಪು ನೀಡುವುದರಿಂದ ಜನರು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸುತ್ತಿದ್ದಾರೆ" ಎಂದು 15 ವರ್ಷಗಳಿಂದ ಕಲ್ಲಂಗಡಿ ವ್ಯಾಪಾರ ಮಾಡುತ್ತಿರುವ ರಾಮನಾಯ್ಕ ಹೇಳಿದರು.

ಕಲ್ಲಂಗಡಿ ಹಣ್ಣಿಗೆ ಹೆಚ್ಚಿನ ಬೇಡಿಕೆ ಇದ್ದು, ಬ್ಲಾಕ್ ಕಲ್ಲಂಗಡಿ ಕಿಲೋಗೆ 25 ಹಾಗೂ ಹಸಿರು ಕಲ್ಲಂಗಡಿ ಕಿಲೋಗೆ 30 ದರದಲ್ಲಿ ಮಾರಾಟವಾಗುತ್ತಿದೆ. ಈ ಬಾರಿ ಕಲ್ಲಂಗಡಿ ವ್ಯಾಪಾರ ಭರ್ಜರಿಯಾಗಿ ನಡೆಯುತ್ತಿದೆ ಎಂದು ವ್ಯಾಪಾರಿಗಳು ತಿಳಿಸಿದ್ದಾರೆ. ಪಟ್ಟಣದ ಬಸವೇಶ್ವರ ಬಜಾರ್, ಮುಖ್ಯ ರಸ್ತೆ, ಹಳೆ ಹಗರಿಬೊಮ್ಮನಹಳ್ಳಿ, ಶ್ರೀ ಕೃಷ್ಣ ಚಿತ್ರಮಂದಿರ ರಸ್ತೆ, ವಿವೇಕಾನಂದ ಬ್ಲಡ್ ಬ್ಯಾಂಕ್ ಹತ್ತಿರ, ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಮತ್ತು ರಾಮನಗರ ಬಸ್ ಸ್ಟ್ಯಾಂಡ್ ಪ್ರದೇಶಗಳಲ್ಲಿ ಕಲ್ಲಂಗಡಿ ಅಂಗಡಿಗಳು ಹೆಚ್ಚಾಗಿ ಕಾಣಿಸುತ್ತಿವೆ. ಕಲ್ಲಂಗಡಿ ಸಿಪ್ಪೆಯನ್ನು ಕಲಾತ್ಮಕವಾಗಿ ಸುಲಿದು ಗಾಜಿನ ಪೆಟ್ಟಿಗೆಯಲ್ಲಿ ಪ್ರದರ್ಶಿಸಿ ಮಾರಾಟ ಮಾಡುವ ದೃಶ್ಯ ಗಮನ ಸೆಳೆಯುತ್ತಿದೆ. ಹಲವೆಡೆ ಪ್ಲೇಟ್ ಕಲ್ಲಂಗಡಿ 20 ದರದಲ್ಲಿ ಮಾರಾಟವಾಗುತ್ತಿದೆ.

ಇದಕ್ಕೆ ಜೊತೆಗೆ ಕಬ್ಬಿನ ರಸದ ಬೇಡಿಕೆಯೂ ಹೆಚ್ಚಿದ್ದು, ಪಟ್ಟಣದ ಬಸವೇಶ್ವರ ಬಜಾರ್ ಸಮೀಪ ಸೇರಿದಂತೆ ವಿವಿಧ ಕಡೆಗಳಲ್ಲಿ ಕಬ್ಬಿನ ಜ್ಯೂಸ್ 20ಕ್ಕೆ ಮಾರಾಟವಾಗುತ್ತಿದೆ. ಎಸ್‌ಬಿಐ ಬ್ಯಾಂಕ್ ಮುಂಭಾಗದಲ್ಲಿ ಕಬ್ಬಿನ ರಸ ಮಾರಾಟ ಮಾಡುತ್ತಿರುವ ನೂರ್ ಸಾಬ್ ಅವರು ಉತ್ತಮ ವ್ಯಾಪಾರ ನಡೆಯುತ್ತಿದೆ ಎಂದು ತಿಳಿಸಿದ್ದಾರೆ.

## ಸೂರಣಗಿ ಉಪಕೇಂದ್ರಕ್ಕೆ ವಿದ್ಯುತ್ ನಿಲುಗಡೆ: ಎ. 21ರಿಂದ ಕಾಮಗಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಬೆಳ್ಳಟ್ಟಿ 110/33/11 ಕೆ.ವಿ. ಉಪಕೇಂದ್ರದಿಂದ ಸೂರಣಗಿ 33/11 ಕೆ.ವಿ. ಉಪಕೇಂದ್ರಕ್ಕೆ ಸಂಪರ್ಕ ಹೊಂದಿರುವ 33 ಕೆ.ವಿ. ಮಾರ್ಗದಲ್ಲಿ ರ್‍ಯಾಬಿಟ್ ವಾಹಕ ಬದಲಿಗೆ ಕೊಯೆಟ್ ವಾಹಕ ಅಳವಡಿಸುವ ಕಾಮಗಾರಿ ಕೈಗೊಳ್ಳಲಾಗುತ್ತಿದೆ.

ಈ ಕಾಮಗಾರಿಯನ್ನು ನಿರ್ವಹಿಸಲು ಮೆ. ಪ್ರಕಾಶ ಮೆಟಲ್ ಪ್ರೋಡಕ್ಟ್ಸ್, ಹುಬ್ಬಳ್ಳಿ ಸಂಸ್ಥೆಗೆ ಅನುಮತಿ ನೀಡಲಾಗಿದ್ದು, ಕಾರ್ಯ ನಿರ್ವಹಣೆಯ ಹಿನ್ನಲೆಯಲ್ಲಿ ನಿರ್ದಿಷ್ಟ ದಿನಾಂಕಗಳಲ್ಲಿ ವಿದ್ಯುತ್ ನಿಲುಗಡೆ ಮಾಡಲಾಗುತ್ತಿದೆ ಎಂದು ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಹುವಿಸಕಂನಿ ಗದಗ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿದ್ಯುತ್ ನಿಲುಗಡೆ ದಿನಾಂಕಗಳು ಮತ್ತು ಸಮಯ,ಎಪ್ರಿಲ್ 21, 2026,ಎಪ್ರಿಲ್ 25, 2026,ಎಪ್ರಿಲ್ 27, 2026,ಎಪ್ರಿಲ್ 30, 2026.ಈ ದಿನಗಳಲ್ಲಿ ಬೆಳಿಗ್ಗೆ 9.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ವಿದ್ಯುತ್ ನಿಲುಗಡೆ ಇರುತ್ತದೆ. ಸಂಜೆ 5.00 ಗಂಟೆಯಿಂದ ಮುಂದಿನ ದಿನ ಬೆಳಿಗ್ಗೆ 9.00 ಗಂಟೆಯವರೆಗೆ ವಿದ್ಯುತ್ ಪೂರೈಕೆ ಮಾಡಲಾಗುತ್ತದೆ.

ಸೂರಣಗಿ 33 ಕೆ.ವಿ. ಉಪಕೇಂದ್ರದಿಂದ ಸಂಪರ್ಕ ಹೊಂದಿರುವ ಎಲ್ಲಾ 11 ಕೆ.ವಿ. ಎನ್.ಜೆ.ವೈ. ನೀರಾವರಿ ಪಂಪ್‌ಸೆಟ್ ಹಾಗೂ ಕುಡಿಯುವ ನೀರಿನ ಮಾರ್ಗಗಳಿಗೆ ಈ ಅವಧಿಯಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಸಾರ್ವಜನಿಕರು ಈ ವಿಷಯವನ್ನು ಗಮನಿಸಿ ಹುವಿಸಕಂನಿ ಸಂಸ್ಥೆಯೊಂದಿಗೆ ಸಹಕರಿಸುವಂತೆ ಅಧಿಕಾರಿಗಳು ವಿನಂತಿಸಿದ್ದಾರೆ.

## ಮಹಿಳಾ ಮೀಸಲಾತಿ ಮಸೂದೆ ಸೋಲಿಗೆ ವಿರೋಧ ಪಕ್ಷವೇ ಕಾರಣ

■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭೆಯ ವಿಶೇಷ ಅಧಿವೇಶನದಲ್ಲಿ ಮಂಡನೆಯಾಗಿದ್ದ ಬಹುನಿರೀಕ್ಷಿತ ಮಹಿಳಾ ಮೀಸಲಾತಿ ಮಸೂದೆ ಮತ ವಿಭಜನೆಯಲ್ಲಿ 278–211 ಅಂತರದಲ್ಲಿ ಸೋಲನುಭವಿಸಿರುವ ಹಿನ್ನೆಲೆಯಲ್ಲಿ ಬಿಜೆಪಿ ಯುವ ಮುಖಂಡ ವಸಂತ ಪಡಗದ ವಿರೋಧ ಪಕ್ಷದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, "ಸಾಂವಿಧಾನಿಕ ತಿದ್ದುಪಡಿಯಾದ ಮಹಿಳಾ ವಿಧೇಯಕಕ್ಕೆ ಬೆಂಬಲ ನೀಡಬೇಕಿದ್ದ ವಿರೋಧ ಪಕ್ಷವು ಲೋಕಸಭೆಯಲ್ಲಿ ಬೆಂಬಲ ನೀಡದೇ ಐತಿಹಾಸಿಕ ಮಸೂದೆ ಸೋಲಿಸಲು ಕಾರಣವಾಗಿದೆ. ಇದು ಐತಿಹಾಸಿಕ ಮಹಿಳಾ ಶಕ್ತಿಗೆ ಮಾಡಿದ ಅನ್ಯಾಯ" ಎಂದು ಆರೋಪಿಸಿದರು.



"ಮಹಿಳೆಯರಿಗೆ 33% ಮೀಸಲಾತಿ ಒದಗಿಸುವ ಈ ಮಹತ್ವದ ಮಸೂದೆಯನ್ನು ಕಾಂಗ್ರೆಸ್ ನೇತೃತ್ವದ ಇಂಡಿ ಒಕ್ಕೂಟ ಸೋಲಿಸಿದೆ. ದೇಶ ಈ ದಿನವನ್ನು ಎಂದಿಗೂ ಮರೆಯುವುದಿಲ್ಲ. ಭವ್ಯ ಭಾರತದ ಇತಿಹಾಸದಲ್ಲಿ ಇದು ಕರಾಳ ದಿನ" ಎಂದು ಅವರು ಹೇಳಿದರು.

ದೇಶದ ಪ್ರಧಾನಿಯೇ ಮಹಿಳಾ ಸಬಲೀಕರಣದ ಹಿತದೃಷ್ಟಿಯಿಂದ ಮಸೂದೆಯನ್ನು ಪಕ್ಷಾತೀತವಾಗಿ ಬೆಂಬಲಿಸುವಂತೆ ಕೋರಿಕೊಂಡಿದ್ದರೂ, ರಾಜಕೀಯ ಹಠದ ಕಾರಣದಿಂದ ವಿರೋಧ ಪಕ್ಷಗಳು ಮಸೂದೆಯನ್ನು ಸೋಲಿಸಿವೆ ಎಂದು ಟೀಕಿಸಿದರು.

"ಇದು ಕೇವಲ ಮಸೂದೆಯ ಸೋಲಲ್ಲ, ದೇಶದ ಸೋಲು. ಮಹಿಳೆಯರ ಹಕ್ಕುಗಳಿಗೆ ಅಡ್ಡಿಯಾದವರನ್ನು ದೇಶದ ನಾರಿಶಕ್ತಿ ಎಂದಿಗೂ ಕ್ಷಮಿಸುವುದಿಲ್ಲ" ಎಂದು ಅವರು ಎಚ್ಚರಿಸಿದರು.

ಕಾಂಗ್ರೆಸ್ ಪಕ್ಷದ ಅಜೆಂಡಾ ಮಹಿಳೆಯರಿಗೆ ಹಕ್ಕುಗಳು ಸಿಗದಂತೆ ಮಾಡುವುದೇ ಆಗಿದ್ದು, ದಶಕಗಳಿಂದ ಮಹಿಳಾ ಮೀಸಲಾತಿ ಜಾರಿಗೆ ಅಡ್ಡಿಪಡಿಸುತ್ತಿರುವ ಇಂಡಿ ಒಕ್ಕೂಟದ ನಿಜಸ್ವರೂಪ ಇದೀಗ ಬಹಿರಂಗವಾಗಿದೆ ಎಂದು ವಸಂತ ಪಡಗದ ಆರೋಪಿಸಿದರು.

### ನಾರಿ ಶಕ್ತಿ ಅಧಿನಿಯಮ ವಿರೋಧಕ್ಕೆ ಗದಗದಲ್ಲಿ ಮಹಿಳಾ ಮೋರ್ಚಾ ಕಿಡಿ

# ವಿಪಕ್ಷಗಳ ವಿರುದ್ಧ ಬಿಜೆಪಿ ಕಾರ್ಯಕರ್ತರ ಪ್ರತಿಭಟನೆ




■ವಿಜಯಸಾಕ್ಷಿ ಸುದ್ದಿ, ಗದಗ

ನಾರಿ ಶಕ್ತಿ ವಂದನಾ ಅಧಿನಿಯಮವನ್ನು ವಿರೋಧಿಸಿದ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳ ವಿರುದ್ಧ ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಮತ್ತು ಗದಗ ನಗರ ಮಂಡಲ ಮಹಿಳಾ ಮೋರ್ಚಾ ವತಿಯಿಂದ ಜಿಲ್ಲಾಧಿಕಾರಿಗಳ ಕಚೇರಿ ಎದುರು ಬೃಹತ್ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಮಾತನಾಡಿ, ಸಂಸತ್ತಿನಲ್ಲಿ ಮಹಿಳಾ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿರುವುದು ಖಂಡನೀಯ ಎಂದು ಹೇಳಿದರು.

ಮಹಿಳಾ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ಶೋಭಾ ನರಸಿಂಹಗೌಡ ಮಾತನಾಡಿ, ನಾರಿ ಶಕ್ತಿ ಅಧಿನಿಯಮವನ್ನು ವಿರೋಧಿಸುವುದು ದೇಶದ ಮಹಿಳೆಯರಿಗೆ ಮಾಡುವ ಅಪಮಾನ ಎಂದರು.

ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ ಅವರು, ಮಹಿಳೆಯರ ಸಬಲೀಕರಣ, ಗೌರವ ಹಾಗೂ ರಾಜಕೀಯ ಪ್ರತಿನಿಧಿತ್ವವನ್ನು ಹೆಚ್ಚಿಸುವ ಉದ್ದೇಶದೊಂದಿಗೆ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಈ ಅಧಿನಿಯಮವನ್ನು ವಿರೋಧಿಸುವ ಮೂಲಕ ಕಾಂಗ್ರೆಸ್ ಹಾಗೂ ಅದರ ಮಿತ್ರ ಪಕ್ಷಗಳು ಮಹಿಳೆಯರಿಗೆ ಅನ್ಯಾಯ ಮಾಡಿದ್ದಾರೆ ಎಂದು ಹೇಳಿದರು. ಗದಗ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಸ್ವಾತಿ ಅಕ್ಕಿ ಮಾತನಾಡಿ, ನಾರಿ ಶಕ್ತಿ ವಂದನಾ ಅಧಿನಿಯಮವು ಮಹಿಳೆಯರಿಗೆ ರಾಜಕೀಯ ಕ್ಷೇತ್ರದಲ್ಲಿ ಹೆಚ್ಚಿನ ಅವಕಾಶಗಳನ್ನು ಒದಗಿಸುವ ಮಹತ್ವದ ಹೆಜ್ಜೆಯಾಗುತ್ತಿತ್ತು. ಆದರೆ ಕಾಂಗ್ರೆಸ್ ಪಕ್ಷದವರು ಈ ಮಸೂದೆಯನ್ನು ವಿರೋಧಿಸಿ ಮಹಿಳೆಯರ ಹಕ್ಕುಗಳಿಗೆ ದ್ರೋಹ ಮಾಡಿದ್ದಾರೆ ಎಂದು ಟೀಕಿಸಿದರು.

> "ಮಹಿಳೆಯರ ಉನ್ನತಿಗೆ ಅಡ್ಡಗಾಲು ಹಾಕಿದ ವಿಪಕ್ಷಗಳನ್ನು ದೇಶದ ನಾರಿಶಕ್ತಿ ಎಂದಿಗೂ ಕ್ಷಮಿಸುವುದಿಲ್ಲ" ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಪಕ್ಷದ ಮುಖಂಡರಾದ ಎಂ.ಎಸ್. ಕರಿಗೌಡ್ರ, ಶ್ರೀಪತಿ ಉಡುಪಿ, ಲಿಂಗರಾಜ ಪಾಟೀಲ, ಪಕ್ಕೀರೇಶ ರಟ್ಟಿಹಳ್ಳಿ, ಸುರೇಶ್ ಮರಳಪ್ಪನವರ, ಸಂತೋಷ ಅಕ್ಕಿ ಸೇರಿದಂತೆ ಅನೇಕ ಪ್ರಮುಖರು ಹಾಗೂ ಮಹಿಳಾ ಕಾರ್ಯಕರ್ತರು ಉಪಸ್ಥಿತರಿದ್ದರು.

# ಜೀವನದಲ್ಲಿ ದೇಶಕ್ಕೆ ಕೊಡುಗೆ ನೀಡುವ ಸಂಕಲ್ಪ ಅಗತ್ಯ



■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಸಂವಿಧಾನ ಶಿಲ್ಪಿ ಡಾ. ಬಿ. ಆರ್. ಅಂಬೇಡ್ಕರ್ ಅವರು ಮನುಕುಲದ ಏಳ್ಗೆ ಹಾಗೂ ಸದೃಢ ರಾಷ್ಟ್ರ ನಿರ್ಮಾಣಕ್ಕಾಗಿ ಶಿಕ್ಷಣ, ಸಮಾನತೆ, ಸಹೋದರತ್ವ, ಸ್ವಾತಂತ್ರ್ಯ ಮತ್ತು ಕರ್ತವ್ಯಗಳ ಮಹತ್ವವನ್ನು ಒತ್ತಿ ಹೇಳಿದ್ದರು. ಆದರೆ ಇಂದಿನ ದಿನಗಳಲ್ಲಿ ಅವರ ಚಿಂತನೆಗಳನ್ನು ಕೆಲವರು ಸ್ವಾರ್ಥಕ್ಕಾಗಿ ತಪ್ಪಾಗಿ ಅರ್ಥೈಸುತ್ತಿದ್ದಾರೆ ಎಂದು ಹಿರಿಯ ವಾಗ್ಮಿ ಪ್ರೊ. ಕೆ. ಎಚ್. ಬೇಲೂರು ಅಭಿಪ್ರಾಯಪಟ್ಟರು.

ಎಸ್.ವೈ.ಬಿ.ಎಂ.ಎಸ್. ಯೋಗಪಾಠಶಾಲೆ, ಗದಗ ಹಾಗೂ ಶ್ರೀ ಜಗದ್ಗುರು ತೋಂಟದಾರ್ಯ ಜಾತ್ರಾ ಮಹೋತ್ಸವ ಸಮಿತಿ-2026 ಇವರ ಸಹಯೋಗದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ಬೇಸಿಗೆ ರಜೆ ಪ್ರಯುಕ್ತ ನಡೆಯುತ್ತಿರುವ 21ನೇ ಸಂಸ್ಕೃತಿ-ಸಂಸ್ಕಾರ ಶಿಬಿರದ ಅಂಗವಾಗಿ ನಡೆದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ಬಾಲ್ಯದಲ್ಲಿಯೇ ಅನೇಕ ಸಂಕಷ್ಟಗಳನ್ನು ಎದುರಿಸಿ, ತಮ್ಮ ಅಸಾಧಾರಣ ಪರಿಶ್ರಮ ಮತ್ತು ದೃಢಸಂಕಲ್ಪದ ಮೂಲಕ ದೇಶದ ಸಂವಿಧಾನ ಶಿಲ್ಪಿಯಾಗಿದ್ದರು ಎಂದು ಅವರು ವಿವರಿಸಿದರು. "ನೀವು ಕೂಡ ಜೀವನದಲ್ಲಿ ಕುಟುಂಬ, ಸಮಾಜ ಮತ್ತು ದೇಶಕ್ಕೆ ಏನಾದರೂ ಕೊಡುಗೆ ನೀಡುವ ಸಂಕಲ್ಪ ಹೊಂದಬೇಕು" ಎಂದು ಶಿಬಿರಾರ್ಥಿಗಳಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಶಿಬಿರ ಸಂಯೋಜಕ ಕೆ. ಎಸ್. ಪಲ್ಲೆ, ತರಬೇತುದಾರ ಎಸ್. ಎಂ. ಬುರಡಿ, ವಚನ ಸಂಗೀತ ಶಿಕ್ಷಕಿ ಸುನಂದಾ ಜ್ಯಾನೋಪಂತರ, ಅಂಬೇಡ್ಕರ್ ವೇಷಧಾರಿಯಾಗಿ ಕು. ಸಂಭ್ರಮ ಜಾಧವ ಹಾಗೂ ಶಿಬಿರಾರ್ಥಿ ಪ್ರತಿನಿಧಿ ನಿಶ್ಚಿತಾ ರೆಡ್ಡಿ ಉಪಸ್ಥಿತರಿದ್ದರು.

# 'ಅಂಚೆಗೆ ಹೋಗದ ಪತ್ರ' ಚಿತ್ರದ 'ಕಣ್ಣಂಚಲೇ ಪ್ರೀತಿ' ಹಾಡು ರಿಲೀಸ್



■ **ವಿಜಯಸಾಕ್ಷಿ ಸುದ್ದಿ, ಬೆಳಗಾವಿ**

ನವಗ್ರಹ ಮತ್ತು ವರ್ಚಸ್ ಸಹಯೋಗದಲ್ಲಿ ಬೆಳಗಾವಿಯ ಯುವ ಪ್ರತಿಭೆಗಳು ನಿರ್ಮಿಸಿರುವ "ಅಂಚೆಗೆ ಹೋಗದ ಪತ್ರ" ಚಿತ್ರದ ಎರಡನೇ ಹಾಡು "ಕಣ್ಣಂಚಲೇ ಪ್ರೀತಿ ಶುರುವಾಯಿತು" ಯೂಟ್ಯೂಬ್‌ನಲ್ಲಿ ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ಪಡೆಯುತ್ತಿದೆ.

ಈ ಹಾಡಿಗೆ ಖ್ಯಾತ ಗಾಯಕ ಪಂಚಮ ಜೀವ ಧ್ವನಿಯಾಗಿದ್ದು, ಎಸ್.ಕೆ.ಎಸ್. ಅವರ ಸಾಹಿತ್ಯ ಹಾಡಿನ ಭಾವನೆಯನ್ನು ಮತ್ತಷ್ಟು ಮನಮುಟ್ಟುವಂತೆ ಮಾಡಿದೆ. ಸಂಪೂರ್ಣ ಉತ್ತರ ಕರ್ನಾಟಕದ ಪ್ರತಿಭೆಗಳ ಒಕ್ಕೂಟದಲ್ಲಿ ನಿರ್ಮಾಣವಾಗಿರುವ ಈ ಚಿತ್ರವನ್ನು ಉತ್ತರ ಕರ್ನಾಟಕದಲ್ಲೇ ಚಿತ್ರೀಕರಿಸಲಾಗಿದೆ.

ಚಿತ್ರದಲ್ಲಿ ಪ್ರವೀಣ ಸುತಾರ ನಾಯಕನಾಗಿ ನಟಿಸುವ ಜೊತೆಗೆ ನಿರ್ದೇಶನದ ಜವಾಬ್ದಾರಿಯನ್ನೂ ಹೊತ್ತಿದ್ದಾರೆ. ನಾಯಕಿಯಾಗಿ ಸಹನಾ ಪ್ರಕಾಶ ಅಭಿನಯಿಸುತ್ತಿದ್ದು, "ರಕ್ಕಸಪುರದೊಳ" ಖ್ಯಾತಿಯ ಸೌಮ್ಯ ಅಮರಪೂರಕರ್ ಹಾಗೂ "ಮಹಾನಟಿ ರನ್ನರ್ ಅಪ್" ವರ್ಷಾ ದಿಗ್ರೇಜೆ ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ.

ಚಿತ್ರಕ್ಕೆ ದಿವಾಕರ ಎಂ. ಸಂಗೀತ ನಿರ್ದೇಶನ, ಮಂಜು ಬಸವರಾಜ ಛಾಯಾಗ್ರಹಣ, ಶಿವ ಗಂಗಾಧರ ರಂಜಿತ ಪಾಂಡೆ ಸಂಕಲನ ಹಾಗೂ ವಿ.ಎಫ್.ಎಕ್ಸ್ ಕೆಲಸ ನಿರ್ವಹಿಸಿದ್ದಾರೆ. ಪತ್ರಿಕಾ ಸಂಪರ್ಕವನ್ನು ಡಾ. ಪ್ರಭು ಗಂಜಿಹಾಳ ಮತ್ತು ಡಾ. ವೀರೇಶ ಹಂಡಿಗಿ ನಿರ್ವಹಿಸಿದ್ದಾರೆ.

ಸಹ ನಿರ್ದೇಶಕರಾಗಿ ವೀಣಾ ಮತ್ತು ವಿಶಾಲ ಕಾರ್ಯ ನಿರ್ವಹಿಸಿದ್ದು, ನಿರ್ಮಾಪಕರಾಗಿ ಪ್ರವೀಣ ತಾನಾಜಿ ಸುತಾರ, ಮಂಜುನಾಥ ಹುಲಮನಿ, ವರ್ಚಸ್ ಮತ್ತು ಪರದಿಶೆ ಕಾರ್ಯ ನಿರ್ವಹಿಸಿದ್ದಾರೆ. ಚಿತ್ರದ ಎಲ್ಲ ಚಿತ್ರೀಕರಣ ಹಾಗೂ ತಾಂತ್ರಿಕ ಕಾರ್ಯಗಳು ಪೂರ್ಣಗೊಂಡಿದ್ದು, ಮೇ ತಿಂಗಳ ಕೊನೆಯ ವಾರದಲ್ಲಿ ಚಿತ್ರವನ್ನು ಬಿಡುಗಡೆ ಮಾಡುವ ಯೋಜನೆ ಇದೆ ಎಂದು ನಿರ್ದೇಶಕ ಪ್ರವೀಣ ಸುತಾರ ತಿಳಿಸಿದ್ದಾರೆ.




**ಗದಗ:** ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ. ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆಯನ್ನು ಗದಗ ನಗರದ ಮಂಜುನಾಥ ನಗರದಲ್ಲಿ ಭಕ್ತಿಪೂರ್ವಕವಾಗಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ, ಅವರ ತತ್ವಗಳು ಹಾಗೂ ಆದರ್ಶಗಳನ್ನು ಸ್ಮರಿಸಲಾಯಿತು. ಸಮಾನತೆ, ನ್ಯಾಯ ಮತ್ತು ಶಿಕ್ಷಣದ ಮಹತ್ವವನ್ನು ಪ್ರತಿಪಾದಿಸಿದ ಅವರ ಕೊಡುಗೆಗಳನ್ನು ಈ ವೇಳೆ ಉಲ್ಲೇಖಿಸಲಾಯಿತು. ಕಾರ್ಯಕ್ರಮದಲ್ಲಿ ಆರ್. ಎಲ್. ಮೇಳೆನವರ, ಬೂದಪ್ಪ ಹುಣಸಿಮರದ, ಹೊಳೆಬಸಪ್ಪ ಅಕ್ಕಿ, ಮಂಜುನಾಥ ಮೇಳೆನವರ, ಹನುಮಾನಸಿಂಗ್ ಜಮಾದಾರ, ಪ್ರತೀಕ ಮೇಳೆನವರ, ಅಲ್ಲಾಭಕ್ಷಿ ರಾಣೇಬೆನ್ನೂರ, ಮಾಬೂಬಿ ಹಿರೆಹಾಳ, ಈರಮ್ಮ ಶಿಂಧೆ, ಸುನಂದಾಬಾಯಿ ರಜಪುತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅಕ್ಷಯ ತೃತೀಯ..! ಶುಭ ತರಲಿ...

ಎಪ್ರಿಲ್ 20 ರಂದು ಬಸವೇಶ್ವರ ಜಯಂತಿ ಹಾಗೂ ಅಕ್ಷಯ ತೃತೀಯ ಒಂದೇ ದಿನ ಬಂದಿದ್ದು, ಶುಭ ಕಾರ್ಯಗಳಿಗೆ ಶುಭ ಸೂಚಿಸುವ ಈ ದಿನವನ್ನು ಜನರು ಸಂಭ್ರಮದಿಂದ ಆಚರಿಸಲು ಸಿದ್ಧರಾಗಿದ್ದಾರೆ. ಅಕ್ಷಯ ತೃತೀಯದ ಪ್ರಯುಕ್ತ ಚಿನ್ನದ ಅಂಗಡಿಗಳು ಶೃಂಗಾರಗೊಂಡಿದ್ದು, ಎಲ್ಲೆಡೆ ಹಬ್ಬದ ಸಂಭ್ರಮ ಕಣ್ಣಿಗೆ ಕಾಣಿಸುತ್ತಿದೆ.

ಅಕ್ಷಯ ತೃತೀಯ ಸಂದರ್ಭದಲ್ಲಿ ಸಾಮಾನ್ಯವಾಗಿ ಜನರು ಚಿನ್ನ, ಬೆಳ್ಳಿ ಹಾಗೂ ವಜ್ರದ ಆಭರಣಗಳನ್ನು ಖರೀದಿಸಲು ಮುಂದಾಗುತ್ತಾರೆ. ಮನೆಯಲ್ಲಿ ಈಗಾಗಲೇ ಸಾಕಷ್ಟು ಚಿನ್ನಾಭರಣಗಳಿದ್ದರೂ, ಈ ದಿನ ಹೊಸದಾಗಿ ಏನಾದರೂ ಖರೀದಿಸಬೇಕು ಎಂಬ ಆಸೆ ಹೆಚ್ಚಾಗಿರುತ್ತದೆ. ಪ್ರತಿ ವರ್ಷ ಈ ದಿನ ಖರೀದಿಸಿದ ಆಭರಣಗಳು ಪೆಟ್ಟಿಗೆಯಲ್ಲಿ ಸೇರುತ್ತಲೇ ಇರುತ್ತವೆ. ಈ ವರ್ಷವೂ ಒಂದು ಚಿನ್ನದ ಆಭರಣವನ್ನು ಸೇರಿಸಿದರೆ ಮನಸ್ಸಿಗೆ ತೃಪ್ತಿ ಎಂಬ ಭಾವನೆ ಜನರಲ್ಲಿ ಕಾಣಿಸುತ್ತದೆ.




ಅಕ್ಷಯ ತೃತೀಯದಂದು ಚಿನ್ನಾಭರಣ, ವಾಹನ ಅಥವಾ ಇತರೆ ಬೆಲೆಬಾಳುವ ವಸ್ತುಗಳನ್ನು ಖರೀದಿಸಿದರೆ ಅದೃಷ್ಟ ಹೆಚ್ಚುತ್ತದೆ ಎಂಬ ನಂಬಿಕೆ ಇದೆ. ಇದೇ ದಿನ ಯಾವುದೇ ಶುಭಕಾರ್ಯ ಆರಂಭಿಸಿದರೂ ಯಶಸ್ಸು ದೊರೆಯುತ್ತದೆ ಎಂಬುದು ಜನಪ್ರಿಯ ನಂಬಿಕೆ. ಈ ದಿನ ಪೂಜೆ, ವ್ರತ, ದಾನ-ಧರ್ಮಗಳನ್ನು ಮಾಡಿದರೆ ಪುಣ್ಯ ಲಭಿಸುತ್ತದೆ ಎಂದು ಭಕ್ತರು ನಂಬುತ್ತಾರೆ.

ಅಕ್ಕಪಕ್ಕದ ಮನೆಗಳಿಗೆ ಅರಿಶಿನ, ಕುಂಕುಮ, ತಾಂಬೂಲ ನೀಡುವುದು, ಗೋ ಪೂಜೆ ಮಾಡುವುದು ಹಾಗೂ ಬಾಳೆ ಎಲೆಯಲ್ಲಿ ಸಿಹಿ ತಿನಿಸುವಂತಹ ಆಚರಣೆಗಳೂ ನಡೆಯುತ್ತವೆ. ಇವುಗಳಿಂದ ವಿವಾಹ ದೋಷಗಳು ಪರಿಹಾರವಾಗುತ್ತವೆ ಎಂಬ ನಂಬಿಕೆ ಇದೆ. ಹೀಗಾಗಿ ಜನರು ಭಕ್ತಿ ಹಾಗೂ ಶ್ರದ್ಧೆಯಿಂದ ಈ ದಿನವನ್ನು ಆಚರಿಸುತ್ತಾರೆ.

**ಆಭರಣ ಖರೀದಿಸುವಾಗ ಗಮನಿಸಬೇಕಾದವುಗಳು:** ಆಭರಣ ಶೋರೂಮ್‌ನಲ್ಲಿ ಹಾಲ್‌ಮಾರ್ಕ್ ಚಿನ್ನವನ್ನೇ ಖರೀದಿಸಿ.

ಒಡವೆ ತೂಕ ಮಾಡುವ ಎಲೆಕ್ಟ್ರಾನಿಕ್ ಯಂತ್ರದ ಮೇಲೆ ನಿಗಾ ವಹಿಸಿ.

**-ವಿ.ಎಂ.ಎಸ್. ಗೋಪಿ,**
ಲೇಖಕರು, ಬೆಂಗಳೂರು

# ಪಿಯುಸಿಯಲ್ಲಿ ಸಾಧನೆ- ರಂಗಭೂಮಿ ಕಲಾವಿದರ ಪುತ್ರಿಯರಿಗೆ ಸನ್ಮಾನ



■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

"ಕಲಾವಿದರ ಕುಟುಂಬಗಳಿಂದ ಬಂದ ಈ ವಿದ್ಯಾರ್ಥಿನಿಯರ ಸಾಧನೆ ಇತರರಿಗೆ ಪ್ರೇರಣೆಯಾಗಬೇಕು" ಎಂದು ರಂಗ ಚೈತ್ರ ಕಲಾ ಬಳಗದ ಗೌರವಾಧ್ಯಕ್ಷ ಶಿವಮೂರ್ತಿ ಹೇಳಿದರು.

ತಾಲೂಕಿನ ಚಿಕ್ಕ ಸೊಬಟಿ ಗ್ರಾಮದ ರಂಗಭೂಮಿ ಕಲಾವಿದ ಎಂ. ಮಹಾಂತೇಶ್ ಅವರ ಪುತ್ರಿ ಸಿ. ಸುಮಿತ್ರಾ ಹಾಗೂ ಲಕಲಹಳ್ಳಿಯ ಗಾಯಕ-ಕಲಾವಿದ ಸೋಮಣ್ಣನವರ ಪುತ್ರಿ ಎಸ್. ಪುಷ್ಪ ಅವರು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದ ಹಿನ್ನೆಲೆಯಲ್ಲಿ ಸನ್ಮಾನಿಸಲಾಯಿತು.

ಗ್ರಾಮೀಣ ಹಿನ್ನಲೆಯಲ್ಲಿ ಬೆಳೆದ ಈ ವಿದ್ಯಾರ್ಥಿನಿಯರು ತಮ್ಮ ತಂದೆ-ತಾಯಿಯ ಕಷ್ಟವನ್ನು ಮನಗಂಡು ಪರಿಶ್ರಮದ ಮೂಲಕ ಉನ್ನತ ಅಂಕಗಳನ್ನು ಗಳಿಸಿ ಸಾಧನೆ ಮಾಡಿದ್ದಾರೆ ಎಂದು ಪ್ರಶಂಸಿಸಲಾಯಿತು.

ಈ ಸಂದರ್ಭದಲ್ಲಿ ರಂಗ ಚೈತ್ರ ಕಲಾ ಬಳಗದ ಅಧ್ಯಕ್ಷ ಕೆ. ಪರಶುರಾಮ್, ರಂಗಭೂಮಿ ಕಲಾವಿದರಾದ ಮಂಜುನಾಥ್, ಶೇಖರಪ್ಪ ಸೀಗನಹಳ್ಳಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು, ವಿದ್ಯಾರ್ಥಿನಿಯರು ಹಾಗೂ ಅವರ ಪಾಲಕರಿಗೆ ಹೃತ್ಪೂರ್ವಕವಾಗಿ ಸನ್ಮಾನಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಸಂಗಪ್ಪ ಚಿಕ್ಕಸಬೂಟಿ, ಗಂಗಾಧರ ಹಗರಿ ಕ್ಯಾದಿಗಿಹಳ್ಳಿ, ಕುಮಾರ್, ಬಸವರಾಜ್ ತೇಲಗೋಳಿ, ರಮೇಶ್, ದೇವರೆಡ್ಡಿ ಸೇರಿದಂತೆ ರಂಗ ಚೈತ್ರ ಕಲಾ ಬಳಗದ ಸದಸ್ಯರು ಭಾಗವಹಿಸಿದ್ದರು.

# ಯಶಸ್ಸಿನ 'ಉದಯ' ಕಂಡ ಪ್ರಾಚಿ-ಸಾಚಿ ಕಬಾಡಿಗೆ ಸನ್ಮಾರ್ಗ ಕಾಲೇಜಿನ ಸನ್ಮಾನ

■ **ವಿಜಯಸಾಕ್ಷಿ ಸುದ್ದಿ, ಗದಗ**

ಗದುಗಿನ ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿನಿಯರಾದ ಪ್ರಾಚಿ ಕಬಾಡಿ ಮತ್ತು ಸಾಚಿ ಕಬಾಡಿ ತಮ್ಮ ಶೈಕ್ಷಣಿಕ ಸಾಧನೆಯ ಮೂಲಕ ಕಾಲೇಜಿಗೆ ಮತ್ತೊಂದು ಗೌರವ ತಂದಿದ್ದಾರೆ.

2025-2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಪ್ರಾಚಿ ಕಬಾಡಿ ಶೇ.96.2 ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದಿದ್ದಾರೆ. ಸಂಖ್ಯಾಶಾಸ್ತ್ರ ಹಾಗೂ ಲೆಕ್ಕಶಾಸ್ತ್ರದಲ್ಲಿ ತಲಾ 99 ಅಂಕಗಳು ಮತ್ತು ಅರ್ಥಶಾಸ್ತ್ರದಲ್ಲಿ 98 ಅಂಕಗಳನ್ನು ಗಳಿಸಿ ಗಮನ ಸೆಳೆದಿದ್ದಾರೆ.

ಅದೇ ರೀತಿ ಸಾಚಿ ಕಬಾಡಿ ಶೇ.94.33 ಅಂಕಗಳನ್ನು ಪಡೆದು ವಾಣಿಜ್ಯ ವಿಭಾಗದಲ್ಲಿ ನಾಲ್ಕನೇ ಸ್ಥಾನ ಪಡೆದಿದ್ದು, ಅರ್ಥಶಾಸ್ತ್ರದಲ್ಲಿ 98, ಸಂಖ್ಯಾಶಾಸ್ತ್ರದಲ್ಲಿ 99 ಹಾಗೂ ಲೆಕ್ಕಶಾಸ್ತ್ರದಲ್ಲಿ 97 ಅಂಕಗಳನ್ನು ಗಳಿಸಿದ್ದಾರೆ.

ವಿದ್ಯಾರ್ಥಿನಿಯರ ಸಾಧನೆಯನ್ನು ಮೆಚ್ಚಿದ ಕಾಲೇಜಿನ ಆಡಳಿತ ಮಂಡಳಿ, ಪ್ರಾಚಾರ್ಯರಾದ ಪ್ರೊ. ಪುನೀತ್ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ ಹಾಗೂ ಆಡಳಿತಾಧಿಕಾರಿ ಎಂ.ಸಿ. ಹಿರೇಮಠ ಅವರು ಅವರ ನಿವಾಸದಲ್ಲೇ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಚೇರ್ಮನ್ ಪ್ರೊ. ರಾಜೇಶ್ ಕುಲಕರ್ಣಿ ವಿದ್ಯಾರ್ಥಿನಿಯರ ಸಾಧನೆಗೆ ಸಂತೋಷ ವ್ಯಕ್ತಪಡಿಸಿ, ಅವರ ಶ್ರಮ ಹಾಗೂ ಉಪನ್ಯಾಸಕರ ಮಾರ್ಗದರ್ಶನವೇ ಈ ಯಶಸ್ಸಿಗೆ ಕಾರಣ ಎಂದು ಹೇಳಿದರು. ವಾಣಿಜ್ಯ ವಿಭಾಗದ ಮುಖ್ಯಸ್ಥ ಪ್ರೊ. ಶಿವಕುಮಾರ ವಜ್ರಬಂಡಿ ಸಹ ಅಭಿನಂದನೆ ಸಲ್ಲಿಸಿದರು. ಸಂಸ್ಥೆಯ ನಿರ್ದೇಶಕರು, ಉಪನ್ಯಾಸಕ ವೃಂದ ಹಾಗೂ ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿನಿಯರ ಮುಂದಿನ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.



# ಗೋವುಗಳ ಆರೋಗ್ಯ ತಪಾಸಣಾ ಶಿಬಿರ

### ಎ.20 ರಂದು ಬಸವ ಹಾಗೂ ರೇಣುಕಾಚಾರ್ಯ ಜಯಂತಿ

■ **ವಿಜಯಸಾಕ್ಷಿ ಸುದ್ದಿ, ಗದಗ**


ಅಖಿಲ ಭಾರತ ವೀರಶೈವ ಮಹಾಸಭಾ ಗದಗ ತಾಲೂಕ ಘಟಕವು ಎ.20 ರಂದು ಸೋಮವಾರ ಸಂಜೆ 5 ಗಂಟೆಗೆ ಗದಗ ಕಳಸಾಪೂರ ರಸ್ತೆಯ ಶಿವಾನಂದ ಮಠದ ಬಳಿ ಇರುವ ಪಂಜರಪೋಳದಲ್ಲಿ ಬಸವ ಜಯಂತಿ ಹಾಗೂ ರೇಣುಕಾಚಾರ್ಯ ಜಯಂತಿಯನ್ನು ವಿನೂತನ ರೀತಿಯಲ್ಲಿ ಆಚರಿಸಲಿದೆ.

ಪಂಜರಪೋಳದ ಗೋಶಾಲಾ ಆವರಣದಲ್ಲಿ ಗೋವುಗಳ ಆರೋಗ್ಯ ತಪಾಸಣಾ ಶಿಬಿರವನ್ನು ಆಯೋಜಿಸಲಾಗಿದ್ದು, ಹಿರಿಯ ಪಶುವೈದ್ಯರಾದ ಡಾ. ಪ್ರಕಾಶ ಜಟ್ಟೆಣ್ಣವರ, ಡಾ. ಜಿನಗಾ, ಡಾ. ಗುರಿಕಾರ ಅವರು ತಮ್ಮ ಸಿಬ್ಬಂದಿಯೊಂದಿಗೆ ಆಗಮಿಸಿ ಜಾನುವಾರುಗಳ ಆರೋಗ್ಯ ತಪಾಸಣೆ ನಡೆಸಲಿದ್ದಾರೆ. ಗೋವುಗಳ ಸಂರಕ್ಷಣೆ, ಗೋಸಂತತಿ ಹಾಗೂ ಗೋವುಗಳ ಮಹತ್ವ ಕುರಿತು ಜನಜಾಗೃತಿ ಮೂಡಿಸಲಾಗುತ್ತದೆ.

ಮುಖ್ಯ ಅತಿಥಿಗಳಾಗಿ ಅಖಿಲ ಭಾರತ ವೀರಶೈವ ಮಹಾಸಭಾದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ಹಿರಿಯ ಪತ್ರಕರ್ತ ಬಸವರಾಜ ದಂಡಿನ ಹಾಗೂ ಶ್ರೀ ಮಹಾವೀರ ಗೋ ಸೇವಾ ಸಮಿತಿಯ ಉಪಾಧ್ಯಕ್ಷ ಪ್ರಕಾಶ ಬಂದಾ ಆಗಮಿಸುವರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾಸಭಾದ ತಾಲೂಕ ಘಟಕದ ಅಧ್ಯಕ್ಷ ಮಹೇಶ ಕೋಟಿ ವಹಿಸುವರು.

ಮಹಾಸಭಾದ ತಾಲೂಕ ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಲತಾ ಮುತ್ತಿನಪೆಂಡಿಮಠ ಸೇರಿದಂತೆ ಪದಾಧಿಕಾರಿಗಳು ಉಪಸ್ಥಿತರಿರುವರು. ಪದಾಧಿಕಾರಿಗಳು, ಆಜೀವ ಸದಸ್ಯರು ಹಾಗೂ ಗೋ ಸಂರಕ್ಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಪ್ರಧಾನ ಕಾರ್ಯದರ್ಶಿ ಸಂಗಮೇಶ ಕವಳಿಕಾಯಿ ಹಾಗೂ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಶೋಭಾ ಗುಗ್ಗರಿ ವಿನಂತಿಸಿದ್ದಾರೆ.

# ಅಂಬೇಡ್ಕರ್ ಶಿಕ್ಷಣವನ್ನು ಶಕ್ತಿಯ ಮೂಲವಾಗಿ ಪರಿಗಣಿಸಿದ್ದರು



■ **ವಿಜಯಸಾಕ್ಷಿ ಸುದ್ದಿ, ಗದಗ**

ಅಂಬೇಡ್ಕರ್ ಅವರ ಚಿಂತನೆಗಳು ಸಮಾನತೆ, ಸ್ವಾತಂತ್ರ್ಯ, ನ್ಯಾಯ ಹಾಗೂ ಸಹೋದರತ್ವದ ಮೌಲ್ಯಗಳ ಮೇಲೆ ಆಧಾರಿತವಾಗಿದ್ದು, ಎಲ್ಲರಿಗೂ ಸಮಾನ ಹಕ್ಕುಗಳು ದೊರೆಯಬೇಕು ಎಂಬುದು ಅವರ ಮೂಲ ಆಶಯವಾಗಿತ್ತು ಎಂದು ಗದಗ ಜಿಲ್ಲಾ ರೆಡ್ಡಿ ಮಹಿಳಾ ಬಳಗದ ವತಿಯಿಂದ ನಡೆದ ಚಿಂತನೆ ಕಾರ್ಯಕ್ರಮದಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶ್ರೀಮತಿ ಗಂಗಾ ದೇಸಾಯಿ, ಅಂಬೇಡ್ಕರ್ ಅವರು ಶಿಕ್ಷಣವನ್ನು ಶಕ್ತಿಯ ಮೂಲವಾಗಿ ಪರಿಗಣಿಸಿದ್ದರು. ಸಮಾಜದ ಹಿಂದುಳಿದ ಮತ್ತು ಶೋಷಿತ ವರ್ಗದ ಜನರು ಶಿಕ್ಷಣದ ಮೂಲಕ ತಮ್ಮ ಜೀವನವನ್ನು ರೂಪಿಸಿಕೊಳ್ಳಬೇಕು ಎಂದು ಅವರು ಪ್ರೇರೇಪಿಸಿದರು ಎಂದರು.

ಶ್ರೀಮತಿ ಶೈಲಜಾ ಕವಲೂರು ಮಾತನಾಡಿ, ಅಂಬೇಡ್ಕರ್ ಅವರು ಜಾತಿ ವ್ಯವಸ್ಥೆ ಮತ್ತು ಅಸ್ಪೃಶ್ಯತೆಯನ್ನು ತೀವ್ರವಾಗಿ ವಿರೋಧಿಸಿದರು. ಜನ್ಮದ ಆಧಾರದ ಮೇಲೆ ಯಾರನ್ನೂ ತಗ್ಗಾಗಿ ನೋಡಬಾರದು ಎಂಬ ನಿಲುವಿನಿಂದ ಅವರು ಸಮಾನತೆಯ ಸಮಾಜ ನಿರ್ಮಾಣಕ್ಕೆ ಜೀವನವನ್ನೇ ಅರ್ಪಿಸಿದರು ಎಂದರು.

ಶ್ರೀಮತಿ ಸುಮಾ ಶಿವನಗೌಡರ್ ಅವರು ಸಂವಿಧಾನಾತ್ಮಕ ನೈತಿಕತೆ ಕುರಿತು ಮಾತನಾಡಿ, ಸಂವಿಧಾನದ ಮೌಲ್ಯಗಳನ್ನು ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಶ್ರೀಮತಿ ಸುನಿತಾ ಕೋನರಡ್ಡಿ ಅವರು ಪ್ರಜಾಪ್ರಭುತ್ವದ ಕುರಿತು ಮಾತನಾಡಿ, ಅದು ಕೇವಲ ಆಡಳಿತ ವ್ಯವಸ್ಥೆಯಲ್ಲ, ಜೀವನ ಶೈಲಿಯೂ ಆಗಿದೆ ಎಂದು ಹೇಳಿದರು. ಶ್ರೀಮತಿ ಕವಿತಾ ಕೊಣ್ಣೂರು ಅವರು ಆರ್ಥಿಕ ನ್ಯಾಯದ ಮಹತ್ವವನ್ನು ವಿವರಿಸಿ, ಸಾಮಾಜಿಕ ಹಾಗೂ ಆರ್ಥಿಕ ಸಮಾನತೆ ಇಲ್ಲದೆ ಸಂಪೂರ್ಣ ಸ್ವಾತಂತ್ರ್ಯ ಸಾಧ್ಯವಿಲ್ಲ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀಮತಿ ಸುಧಾ ಹುಚ್ಚಣ್ಣವರ್, ಶ್ರೀಮತಿ ವೀಣಾ ತಿರ್ಲಾಪೂರ, ಶ್ರೀಮತಿ ದ್ರಾಕ್ಷಾಯಿಣಿ ಶಿವಪ್ಪಗೌಡ, ಶ್ರೀಮತಿ ಶಾರದಾ ಕವಲೂರ್, ಶ್ರೀಮತಿ ಶೋಭಾ ಪಾಟೀಲ್, ಶ್ರೀಮತಿ ವಿದ್ಯಾ ಕೊಳ್ಳಿ, ಶ್ರೀಮತಿ ಜಯಶ್ರೀ ಕೆಂಚರೆಡ್ಡಿ, ಶ್ರೀಮತಿ ಲಕ್ಷ್ಮಿ ಸೋಮನಗೌಡರ್, ಶ್ರೀಮತಿ ಶ್ರೀದೇವಿ ಇನಾಮತಿ, ಶ್ರೀಮತಿ ಗಂಗಾ ದೇಸಾಯಿ, ಶ್ರೀಮತಿ ಸುರೇಖಾ ಇನಾಮತಿ, ಶ್ರೀಮತಿ ಲಲಿತ ಕುರ್ತುಕೋಟಿ ಹಾಗೂ ಮುಂತಾದ ರೆಡ್ಡಿ ಬಳಗದ ಮಹಿಳೆಯರು ಉಪಸ್ಥಿತರಿದ್ದರು.

# ಸರ್ಕಾರಿ ಶಾಲೆಗಳಲ್ಲಿ ಇಂಗ್ಲಿಷ್ ಹೇರಿಕೆಗೆ ಎಐಡಿಎಸ್‌ಓ ವಿರೋಧ



■ **ವಿಜಯಸಾಕ್ಷಿ ಸುದ್ದಿ, ಗದಗ**

"ಕನ್ನಡವನ್ನು ಹತ್ತಿಕ್ಕಿ ಇಂಗ್ಲಿಷ್ ಹೇರುವುದು ನಾಡಿನ ಜನತೆಗೆ ಮಾಡಿದ ದ್ರೋಹ. ಕೂಡಲೇ ಸರ್ಕಾರ ಈ ನಿರ್ಧಾರವನ್ನು ಹಿಂಪಡೆಯಬೇಕು" ಎಂದು ಶಾಂತಿ ಆಗ್ರಹಿಸಿದರು.

"ಮಾತೃಭಾಷೆಯಲ್ಲಿ ಕನಿಷ್ಠ 5ನೇ ತರಗತಿವರೆಗೂ ಶಿಕ್ಷಣ ನೀಡುವುದು ಮಗುವಿನ ಬೌದ್ಧಿಕ ಹಾಗೂ ಮಾನಸಿಕ ವಿಕಾಸಕ್ಕೆ ಅತ್ಯಗತ್ಯ. ಕನ್ನಡವನ್ನು ಕಡೆಗಣಿಸಿ ಇಂಗ್ಲಿಷ್ ಹೇರಿಕೆ ಮಾಡುವುದು ಅಕ್ಷಮ್ಯ" ಎಂದು ಎಐಡಿಎಸ್‌ಓ ಜಿಲ್ಲಾ ಸಂಚಾಲಕಿ ಎಂ. ಶಾಂತಿ ಹೇಳಿದ್ದಾರೆ.

ಪತ್ರಿಕಾ ಪ್ರಕಟಣೆಯಲ್ಲಿ ಅವರು, ರಾಜ್ಯದ 4404 ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಒಂದನೇ ತರಗತಿಯಿಂದಲೇ ಆಂಗ್ಲ ಮಾಧ್ಯಮ ಆರಂಭಿಸಲು ಸರ್ಕಾರ ಆದೇಶಿಸಿರುವುದು ಅವೈಜ್ಞಾನಿಕ ಮತ್ತು ಜನವಿರೋಧಿ ಕ್ರಮ ಎಂದು ಆರೋಪಿಸಿದರು. ಸರ್ಕಾರ ಇದನ್ನು ದ್ವಿಭಾಷಾ ಮಾಧ್ಯಮ ಎಂದು ಹೇಳುತ್ತಿದ್ದರೂ, ಅನೇಕ ಶಾಲೆಗಳಲ್ಲಿ ಕೇವಲ ಇಂಗ್ಲಿಷ್‌ನಲ್ಲಿ ಪಾಠ ಮಾಡುವಂತೆ ಶಿಕ್ಷಕರಿಗೆ ಸೂಚನೆ ನೀಡಲಾಗುತ್ತಿದೆ. ಕೆಲವು ಕಡೆ ಜೂನ್ ತಿಂಗಳಿಂದ ಕನ್ನಡ ಮಾಧ್ಯಮವನ್ನು ಸಂಪೂರ್ಣ ಕೈಬಿಟ್ಟು ಕೇವಲ ಇಂಗ್ಲಿಷ್ ಮಾಧ್ಯಮಕ್ಕೆ ಅವಕಾಶ ನೀಡಲಾಗುತ್ತಿದೆ ಎಂಬ ಮಾಹಿತಿ ದೊರೆತಿದೆ ಎಂದು ಅವರು ಹೇಳಿದರು.

ಇಂಗ್ಲಿಷ್ ಕಲಿಕೆ ಅಗತ್ಯವಾದರೂ ಕನ್ನಡವನ್ನು ಹಿನ್ನಡೆಯಿಸುವುದು ಸರಿಯಲ್ಲ ಎಂದು ತಿಳಿಸಿದ ಅವರು, ನಾಡಿನ ವಿದ್ಯಾರ್ಥಿಗಳು, ಯುವಜನರು, ಪೋಷಕರು ಹಾಗೂ ಶಿಕ್ಷಣ ಪ್ರೇಮಿಗಳು ಕನ್ನಡದ ರಕ್ಷಣೆಗೆ ಧ್ವನಿಯೆತ್ತಬೇಕು ಎಂದು ಮನವಿ ಮಾಡಿದ್ದಾರೆ.

# ಮಹಿಳಾ ಮೀಸಲಾತಿ ಮಸೂದೆ ಸೋಲು: ವಿಪಕ್ಷಗಳ ವಿರುದ್ಧ ಸ್ವಾತಿ ಅಕ್ಕಿ ವಾಗ್ದಾಳಿ



■ವಿಜಯಸಾಕ್ಷಿ ಸುದ್ದಿ, ಗದಗ

ನಾರಿ ಶಕ್ತಿ ವಂದನಾ ಅಧಿನಿಯಮ ಮಸೂದೆಯನ್ನು ಸೋಲಿಸಿದ ಹಿನ್ನೆಲೆಯಲ್ಲಿ ಕಾಂಗ್ರೆಸ್ ನೇತೃತ್ವದ ವಿಪಕ್ಷಗಳ ವಿರುದ್ಧ ಗದಗ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ಸ್ವಾತಿ ಅಕ್ಕಿ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ ಅವರು, "ಮಹಿಳೆಯರಿಗೆ 33% ಮೀಸಲಾತಿ ಒದಗಿಸುವ ಐತಿಹಾಸಿಕ ಮಸೂದೆಯನ್ನು ಕಾಂಗ್ರೆಸ್ ನೇತೃತ್ವದ ಇಂಡಿ ಒಕ್ಕೂಟ ಸೋಲಿಸಿದೆ. ಮಹಿಳೆಯರ ಉನ್ನತಿಗೆ ಅಡ್ಡಗಾಲು ಹಾಕಿದ ವಿಪಕ್ಷಗಳನ್ನು ದೇಶದ ನಾರಿಶಕ್ತಿ ಎಂದಿಗೂ ಕ್ಷಮಿಸುವುದಿಲ್ಲ" ಎಂದು ಆರೋಪಿಸಿದರು.

"ದೇಶ ಈ ದಿನವನ್ನು ಎಂದಿಗೂ ಮರೆಯುವುದಿಲ್ಲ. ಭವ್ಯ ಭಾರತದ ಇತಿಹಾಸದಲ್ಲಿ ಇದು ಕರಾಳ ದಿನವಾಗಿದೆ. ದೇಶದ ಹಿತದೃಷ್ಟಿಯಿಂದ ಹಾಗೂ ಮಹಿಳೆಯರ ಸಬಲೀಕರಣಕ್ಕಾಗಿ ಪ್ರಧಾನಿಯೇ ಮಸೂದೆಯನ್ನು ಪಕ್ಷಾತೀತವಾಗಿ ಬೆಂಬಲಿಸುವಂತೆ ಕೋರಿಕೊಂಡರೂ, ರಾಜಕೀಯ ಹಠದಿಂದ ವಿಪಕ್ಷಗಳು ಮಸೂದೆಯನ್ನು ಸೋಲಿಸಿವೆ" ಎಂದು ಟೀಕಿಸಿದರು.

"ಇದು ಕೇವಲ ಮಸೂದೆಯ ಸೋಲಲ್ಲ, ದೇಶದ ಸೋಲು. ದೇಶದ ಜನತೆ ಕಾಂಗ್ರೆಸ್ ಪಕ್ಷವನ್ನು ಎಂದಿಗೂ ಕ್ಷಮಿಸುವುದಿಲ್ಲ. 70 ಕೋಟಿ ಮಹಿಳೆಯರ 33% ಮೀಸಲಾತಿ ಹಕ್ಕನ್ನು ಕಸಿದುಕೊಂಡವರನ್ನು ಇತಿಹಾಸ ಮರೆಯುವುದಿಲ್ಲ" ಎಂದು ಹೇಳಿದರು.

ಮಹಿಳೆಯರ ಭವಿಷ್ಯಕ್ಕಾಗಿ ನಿಂತವರು ಯಾರು ಹಾಗೂ ರಾಜಕೀಯ ಲಾಭಕ್ಕಾಗಿ ಮಹಿಳೆಯರ ಹಕ್ಕಿಗೆ ಧಕ್ಕೆ ತಂದವರು ಯಾರು ಎಂಬುದನ್ನು ದೇಶ ಗಮನಿಸುತ್ತಿದೆ ಎಂದು ಸ್ವಾತಿ ಅಕ್ಕಿ ಹೇಳಿದ್ದಾರೆ.

# ಗುರುವಿನ ಮಾರ್ಗದರ್ಶನ ಯಶಸ್ಸಿಗೆ ಆಧಾರ

## ಲಕ್ಷ್ಮೇಶ್ವರದಲ್ಲಿ ಗುರುವಂದನಾ-ಸ್ನೇಹ ಸಮ್ಮಿಲನ ಕಾರ್ಯಕ್ರಮದಲ್ಲಿ ಪ್ರೊ. ಎಸ್.ಎಫ್. ಕೊಡ್ಲಿ



"ವಿದ್ಯಾರ್ಥಿಗಳು ಜೀವನದಲ್ಲಿ ಸಾಧನೆ ಮಾಡಿದಾಗ ಹೆಚ್ಚು ಸಂತೋಷ ಪಡುವವರು ಗುರುಗಳು ಮತ್ತು ಪೋಷಕರು."

– ಪ್ರೊ. ಕೊಡ್ಲಿ.

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಬ್ಬ ವ್ಯಕ್ತಿಯೂ ಜೀವನದಲ್ಲಿ ಯಶಸ್ಸು ಗಳಿಸಲು ಗುರುವಿನ ಮಾರ್ಗದರ್ಶನ ಹಾಗೂ ಆಶೀರ್ವಾದ ಅತ್ಯಗತ್ಯ ಎಂದು ಪಟ್ಟಣದ ಅಂಗಡಿ ಎಂಜಿನಿಯರಿಂಗ್ ಕಾಲೇಜಿನ ದೈಹಿಕ ನಿರ್ದೇಶಕ ಪ್ರೊ. ಎಸ್. ಎಫ್. ಕೊಡ್ಲಿ ಹೇಳಿದರು.

ಪಟ್ಟಣದ ಹೊಸ ಬಸ್ ನಿಲ್ದಾಣದ ಸಮೀಪದ ಶಿಂಗಾರ್ ಫಂಕ್ಷನ್ ಹಾಲ್‌ನಲ್ಲಿ 1998-99ನೇ ಸಾಲಿನ ಸಿಪಿಎಡ್ ವಿದ್ಯಾರ್ಥಿಗಳು ಆಯೋಜಿಸಿದ್ದ ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ವಿದ್ಯಾರ್ಥಿಗಳನ್ನು ಯಾವುದೇ ದುರುದ್ದೇಶದಿಂದ ಶಿಕ್ಷಿಸುವುದಿಲ್ಲ. ಬದಲಾಗಿ ಅವರ ಭವಿಷ್ಯ ಉಜ್ವಲವಾಗಲೆಂಬ ಆಶಯದಿಂದ ಬೈದು, ತಿದ್ದಿ ಮಾರ್ಗದರ್ಶನ ನೀಡುತ್ತಾರೆ. ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಗುರುಗಳನ್ನು ಮೀರಿಸುವ ಮಟ್ಟಕ್ಕೆ ಬೆಳೆಯಬೇಕು ಎನ್ನುವುದು ಶಿಕ್ಷಕರ ಆಶಯವಾಗಿರುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಾಪೂಗೌಡ ಪಾಟೀಲ, ಸಕ್ರಪ್ಪ ಹಳ್ಳೂರ, ಶರಣಪ್ಪ ನರೆಗಲ್ಲ, ಬಿ.ಕೆ. ಗಡಿಯಪ್ಪನವರ, ಅಶೋಕ ಸೊರಟೂರ ಸೇರಿದಂತೆ ಹಲವರು ಮಾತನಾಡಿದರು. ಕಾರ್ಯಕ್ರಮದಲ್ಲಿ ಕಲಿಸಿದ ಗುರುಗಳಿಗೆ ಸನ್ಮಾನ ನೆರವೇರಿಸಲಾಯಿತು.

ವಿಶ್ವನಾಥ್ ಹೊಸಮನಿ, ಶಂಭು ಕನವಳ್ಳಿ, ಎಂ.ಬಿ. ಪಾಟೀಲ, ಮಹ್ಮದ್ ಅಸ್ಗರ್ ಪಟೇಲ್, ಶಿವಾನಂದ ಮುದಗಲ್ಲ, ಜಗದೇವ ತೇಲಿ, ಫಕ್ಕಿರೇಶ ರಾಮಗೇರಿ, ಹರೀಶ ಲಕ್ಷ್ಮೇಶ್ವರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಚಂದ್ರು ನೇಕಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಜಕುಮಾರ ಎಂ. ಮತ್ತು ಶಿವಕುಮಾರ ಕುರಿ ತಮ್ಮ ವಿದ್ಯಾರ್ಥಿ ಜೀವನದ ಅನುಭವಗಳನ್ನು ಹಂಚಿಕೊಂಡರು. ಗೌರಮ್ಮ ತಳವಾರ ಮತ್ತು ಎಂ. ಪ್ರಕಾಶ್ ಕಾರ್ಯಕ್ರಮ ನಿರ್ವಹಿಸಿದರು.

# ಸನ್ಮಾರ್ಗ ಕಾಲೇಜು ವಿದ್ಯಾರ್ಥಿನಿ ದಿವ್ಯಾಶ್ರೀಗೆ ಗೌರವ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗಿನ ಸ್ಟುಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಪ್ರತಿವರ್ಷ ಸಾಧನೆಯ ಮೆಟ್ಟಿಲೇರಿಸುತ್ತಿರುವುದಕ್ಕೆ 2025-2026ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಕುಮಾರಿ ದಿವ್ಯಾಶ್ರೀ ಬಂಡಿವಾಡಮಠ ಜೀವಂತ ಸಾಕ್ಷಿಯಾಗಿದ್ದಾಳೆ.

ದಿವ್ಯಾಶ್ರೀ ಅವರು ಒಟ್ಟು ಶೇ. 95.17 ಅಂಕಗಳನ್ನು ಗಳಿಸಿದ್ದು, ಸಂಖ್ಯಾಶಾಸ್ತ್ರದಲ್ಲಿ 100ಕ್ಕೆ 99, ಲೆಕ್ಕಶಾಸ್ತ್ರದಲ್ಲಿ 100ಕ್ಕೆ 96 ಹಾಗೂ ಅರ್ಥಶಾಸ್ತ್ರದಲ್ಲಿ 100ಕ್ಕೆ 98 ಅಂಕಗಳನ್ನು ಪಡೆದು ಮಹಾವಿದ್ಯಾಲಯದ ವಾಣಿಜ್ಯ ವಿಭಾಗದಲ್ಲಿ ದ್ವಿತೀಯ ಸ್ಥಾನವನ್ನು ತಮ್ಮದಾಗಿಸಿಕೊಂಡಿದ್ದಾರೆ.

ವಿದ್ಯಾರ್ಥಿನಿಯ ಈ ಸಾಧನೆಯನ್ನು ಗೌರವಿಸಿ ಕಾಲೇಜಿನ ಆಡಳಿತ ಮಂಡಳಿಯ ನಿರ್ದೇಶಕರಾದ ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ಪರಶುರಾಮ ಕೊಟ್ನಿಕಲ್ ಹಾಗೂ ಪ್ರೊ. ಸಂಗೀತಾ ಬೀಳಗಿ ಅವರು ತಮ್ಮ ನಿವಾಸದಲ್ಲಿ ಸಂಭ್ರಮದ ಸನ್ಮಾನ ನೆರವೇರಿಸಿದರು. ವಿದ್ಯಾರ್ಥಿನಿಯ ಅವಿರತ ಪರಿಶ್ರಮ ಹಾಗೂ ಉಪನ್ಯಾಸಕರ ಮಾರ್ಗದರ್ಶನವೇ ಈ ಸಾಧನೆಗೆ ಕಾರಣವಾಗಿದೆ ಎಂದು ಚೇರ್‌ಮನ್ ಪ್ರೊ. ರಾಜೇಶ್ ಕುಲಕರ್ಣಿ ಹರ್ಷ ವ್ಯಕ್ತಪಡಿಸಿದರು.

ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಪ್ರೊ. ಶಿವಕುಮಾರ ವಜ್ರಬಂಡಿ, ಉಪನ್ಯಾಸಕರ ನಿರೀಕ್ಷೆಯನ್ನು ಈಡೇರಿಸಿದ್ದಕ್ಕಾಗಿ ವಿದ್ಯಾರ್ಥಿನಿಯನ್ನು ಅಭಿನಂದಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಚೇರ್‌ಮನ್ ಪ್ರೊ. ರಾಜೇಶ್ ಕುಲಕರ್ಣಿ, ಪ್ರಾಚಾರ್ಯರಾದ ಪ್ರೊ. ಪುನೀತ್ ದೇಶಪಾಂಡೆ, ಆಡಳಿತಾಧಿಕಾರಿ ಶ್ರೀ ಮೃತ್ಯುಂಜಯ್ಯ ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ ಸೇರಿದಂತೆ ಸಮಸ್ತ ಉಪನ್ಯಾಸಕ ವೃಂದ ಹಾಗೂ ಬೋಧಕೇತರ ಸಿಬ್ಬಂದಿ ವಿದ್ಯಾರ್ಥಿನಿಯ ಭವಿಷ್ಯ ಉಜ್ವಲವಾಗಲಿ ಎಂದು ಹಾರೈಸಿದರು.

# ಕೆ ಎಚ್. ಪಾಟೀಲ ಜನ್ಮದಿನ: ಇಂದು ರೋಗಿಗಳಿಗೆ ಹಣ್ಣು-ಹಂಪಲು ವಿತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾದ ಕೃಷ್ಣಗೌಡ ಎಚ್. ಪಾಟೀಲ ಅವರ ಹುಟ್ಟುಹಬ್ಬದ ನಿಮಿತ್ತ ಎಪ್ರಿಲ್ 19ರಂದು ವಿವಿಧ ಸೇವಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಈ ಅಂಗವಾಗಿ ಬೆಳಿಗ್ಗೆ 10.30 ಗಂಟೆಗೆ ಗದಗ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು-ಹಂಪಲು, ಬ್ರೆಡ್, ಬಿಸ್ಕತ್ ಸೇರಿದಂತೆ ಅಗತ್ಯ ವಸ್ತುಗಳನ್ನು ವಿತರಿಸಲಾಗುತ್ತದೆ.

ಸಂಜೆ 6.00 ಗಂಟೆಗೆ ವಿ.ಡಿ.ಎಸ್.ಟಿ.ಸಿ ಮೈದಾನದಲ್ಲಿ 32 ಕೆ.ಜಿ. ಕೇಕ್ ಕತ್ತರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಅಭಿಮಾನಿಗಳು ಹಾಗೂ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಗಮೇಶ ಕೌಳಿಕಾಯಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ನರೇಗಲ್ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿರುವ ಸಾರ್ವಜನಿಕರಿಗೆ ತಿಳಿಯಪಡಿಸುವುದೇನೆಂದರೆ, The Prohibition of Employment as Manual Scavengers and their Rehabilitation Act, 2013 ಅನ್ವಯ ಒಳಚರಂಡಿ ಮತ್ತು ಸೆಪ್ಟಿಕ್ ಟ್ಯಾಂಕ್‌ಗಳನ್ನು ಕೈಯಿಂದ ಅಪಾಯಕಾರಿ ರೀತಿಯಲ್ಲಿ ಸ್ವಚ್ಛಗೊಳಿಸುವಿಕೆಯನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಮನೆಗಳ ಸೆಪ್ಟಿಕ್ ಟ್ಯಾಂಕ್‌ಗಳು ತುಂಬಿದಲ್ಲಿ, ಯಾವುದೇ ವ್ಯಕ್ತಿಯಿಂದ ಕೈಯಿಂದ ಸ್ವಚ್ಛಗೊಳಿಸದೇ, ಪಟ್ಟಣ ಪಂಚಾಯತಿಯಲ್ಲಿ ಲಭ್ಯವಿರುವ ಸಕ್ಷನ್ ಮೆಷಿನ್ (Suction Machine) ಮೂಲಕವೇ ಸ್ವಚ್ಛಗೊಳಿಸಬೇಕು ಎಂದು ಸೂಚಿಸಲಾಗಿದೆ.

ಯಾವುದೇ ರೀತಿಯ ಅನೈರ್ಮಲ್ಯ ಶೌಚಾಲಯಗಳನ್ನು ಹೊಂದುವುದು ಹಾಗೂ ಅವುಗಳನ್ನು ಬರಿಗೈಯಿಂದ ಸ್ವಚ್ಛಗೊಳಿಸುವುದು ಕಾನೂನುಬಾಹಿರವಾಗಿದ್ದು, ಉಲ್ಲಂಘನೆ ಮಾಡಿದವರಿಗೆ ಕಾನೂನು ಪ್ರಕಾರ ದಂಡ ಹಾಗೂ ಶಿಕ್ಷೆ ವಿಧಿಸಲಾಗುತ್ತದೆ.

ಸೆಪ್ಟಿಕ್ ಟ್ಯಾಂಕ್‌ಗಳನ್ನು ಮಾನದಂಡಗಳಿಗೆ ಅನುಗುಣವಾಗಿ ನಿರ್ಮಿಸಬೇಕು ಎಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ನರೇಗಲ್ ಪಟ್ಟಣ ಪಂಚಾಯತ್ ಕಾರ್ಯಾಲಯದ ದೂರವಾಣಿ ಸಂಖ್ಯೆ 08381-268228 ಅನ್ನು ಸಂಪರ್ಕಿಸಬಹುದು.

# ಜೀವನ ದರ್ಶನ' ಪ್ರವಚನ ಮಾಲಿಕೆ

## ದಾರ್ಶನಿಕ ಚಿಂತನೆಯಿಂದ ಸನ್ಮಾರ್ಗದ ಬದುಕು ಒಪ್ಪತ್ತೇಶ್ವರ ಸ್ವಾಮೀಜಿ ಮಾರ್ಗದರ್ಶನ




■ವಿಜಯಸಾಕ್ಷಿ ಸುದ್ದಿ, ಗದಗ

"ಸತ್ಯ, ಧರ್ಮ, ಶಾಂತಿ ಮತ್ತು ಮೋಕ್ಷದಂತಹ ಮೂಲ ತತ್ವಗಳನ್ನು ಅಳವಡಿಸಿಕೊಂಡು ಸತ್ಕಾರ್ಯಗಳ ಮೂಲಕ ಜೀವನವನ್ನು ಸಾರ್ಥಕ ಮಾಡಿಕೊಳ್ಳಬೇಕು" ಎಂದು ಸ್ವಾಮೀಜಿ ನುಡಿದರು.

ದೈನಂದಿನ ಬದುಕಿನಲ್ಲಿ ಜೀವನವನ್ನು ಸಾರ್ಥಕಗೊಳಿಸಲು ದಾರ್ಶನಿಕ ಚಿಂತನೆ ಅಗತ್ಯವಾಗಿದ್ದು, ಸತ್ಯ, ಧರ್ಮ, ಶಾಂತಿ ಹಾಗೂ ಮೋಕ್ಷದ ಮೌಲ್ಯಗಳನ್ನು ಅಳವಡಿಸಿಕೊಂಡಾಗ ಜೀವನ ಸನ್ಮಾರ್ಗದತ್ತ ಸಾಗುತ್ತದೆ ಎಂದು ಅಭಿನವ ಒಪ್ಪತ್ತೇಶ್ವರ ಸ್ವಾಮಿಗಳು ಹೇಳಿದರು.

ನಗರದ ವಿವೇಕಾನಂದ ನಗರದಲ್ಲಿರುವ ಕಾಶೀ ವಿಶ್ವನಾಥ ದೇವಸ್ಥಾನದ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಭವನದಲ್ಲಿ ಸ್ವಾಮಿ ವಿವೇಕಾನಂದ ಸಾಂಸ್ಕೃತಿಕ ಸಮಿತಿ ವತಿಯಿಂದ ಆಯೋಜಿಸಿದ್ದ 57ನೇ 'ಜೀವನ ದರ್ಶನ' ಪ್ರವಚನ ಮಾಲಿಕೆಯಲ್ಲಿ ಅವರು ಸಾನಿಧ್ಯ ವಹಿಸಿ ಮಾತನಾಡಿದರು.

ಕಾಶೀ ವಿಶ್ವನಾಥ ದೇವಸ್ಥಾನ ಮತ್ತು ಸಾಂಸ್ಕೃತಿಕ ಭವನದ ಅಭಿವೃದ್ಧಿಗೆ ಸಮಿತಿಯ ಪದಾಧಿಕಾರಿಗಳ ಪರಿಶ್ರಮ ಶ್ಲಾಘನೀಯವಾಗಿದ್ದು, ಮುಂದಿನ 60ನೇ ಪ್ರವಚನ ಮಾಲಿಕೆಯನ್ನು ವಿಶೇಷವಾಗಿ ಆಚರಿಸುವಂತೆ ಸಲಹೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷ ಎ.ಟಿ. ನರೇಗಲ್ಲ ಅವರು, ಪ್ರತಿ ತಿಂಗಳು ನಡೆಯುವ ಈ ಪ್ರವಚನ ಮಾಲಿಕೆ ಜನರಲ್ಲಿ ಧಾರ್ಮಿಕ ಹಾಗೂ ವೈಚಾರಿಕ ಜಾಗೃತಿಯನ್ನು ಮೂಡಿಸುತ್ತಿದೆ ಎಂದು ಹೇಳಿದರು.

ಮಾಜಿ ಉಪಾಧ್ಯಕ್ಷ ಶಂಕರ ಹಾನಗಲ್ಲ ಅವರು, ಸಮಿತಿಯ ಸಮಾಜಮುಖಿ ಕಾರ್ಯಗಳನ್ನು ಪ್ರಶಂಸಿಸಿದರು. ಈ ವೇಳೆ ಶಂಕರ ಹಾನಗಲ್ಲ, ಟಿ. ಕಲ್ಯಾಣ ಚಕ್ರವರ್ತಿ ಹಾಗೂ ಬಿ.ವಿ. ಪಾಟೀಲ ಅವರನ್ನು ಸನ್ಮಾನಿಸಲಾಯಿತು.

ಸಂಗೀತ ಕಾರ್ಯಕ್ರಮವನ್ನು ಈರನಗೌಡ ಮಣಕವಾಡ, ಸಂಕೇತ ಮಸನಿ ಹಾಗೂ ವಿಠ್ಠಲ ಹೂಗಾರ ನೆರವೇರಿಸಿದರು. ಕಸ್ತೂರಿ ಕಮ್ಮಾರ ಪ್ರಾರ್ಥಿಸಿದರು. ಕೆ.ಪಿ. ಗುಳಗೌಡರ ಸ್ವಾಗತಿಸಿದರು. ವಿ.ಕೆ. ಗುರುಮಠ ನಿರೂಪಣೆ ಮಾಡಿದರು. ಎಸ್. ಎಸ್. ಪಾಳೇಗಾರ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿ.ಜಿ. ಕುಲಕರ್ಣಿ, ಆರ್.ಆರ್. ಕಾಶಪ್ಪನವರ, ಸುದರ್ಶನ ಹಾನಗಲ್ ಸೇರಿದಂತೆ ಅನೇಕ ಗಣ್ಯರು ಮತ್ತು ಭಕ್ತರು ಭಾಗವಹಿಸಿದ್ದರು.

# ದೀಪದ ಕಿಡಿಯಿಂದ ದಿನಸಿ ಅಂಗಡಿ ಸುಟ್ಟು ಭಸ್ಮ



"ಸಾಲ ಮಾಡಿ ದಿನಸಿ ಸಾಮಗ್ರಿ ತಂದಿದ್ದೆವು. ಈಗ ಎಲ್ಲವೂ ಬೆಂಕಿಗೆ ಆಹುತಿಯಾಗಿದೆ. ಕುಟುಂಬ ನಡೆಸುವುದು ಕಷ್ಟವಾಗಿದೆ. ಸರ್ಕಾರದಿಂದ ತಕ್ಷಣ ಪರಿಹಾರ ನೀಡಿದರೆ ನಮಗೆ ತುಂಬಾ ಸಹಾಯವಾಗುತ್ತದೆ"

– ಲಕ್ಷ್ಮವ್ವ ಕಟ್ಟಿಮನಿ, ಅಂಗಡಿ ಮಾಲಿಕರು.

■ವಿಜಯಸಾಕ್ಷಿ ಸುದ್ದಿ, ಡಂಬಳ

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಡಂಬಳ ಹೋಬಳಿಯ ಜಂತ್ಲಿ ಶಿರೂರು ಗ್ರಾಮದಲ್ಲಿ ದೀಪದ ಕಿಡಿಯಿಂದ ದಿನಸಿ ಅಂಗಡಿ ಹೊತ್ತಿ ಉರಿದು ಸಂಪೂರ್ಣವಾಗಿ ಭಸ್ಮವಾದ ಘಟನೆ ನಡೆದಿದೆ.

ರಾತ್ರಿ ಸುಮಾರು 1:30ರ ವೇಳೆ ಲಕ್ಷ್ಮವ್ವ ಕಟ್ಟಿಮನಿ ಅವರಿಗೆ ಸೇರಿದ ಅಂಗಡಿಯಲ್ಲಿ ದೀಪ ಹಚ್ಚಿ ಇಟ್ಟಿದ್ದ ಕಿಡಿಯಿಂದ ಬೆಂಕಿ ತಗುಲಿರುವ ಶಂಕೆ ವ್ಯಕ್ತವಾಗಿದೆ. ಕೆಲವೇ ಕ್ಷಣಗಳಲ್ಲಿ ಬೆಂಕಿ ಅಂಗಡಿಯನ್ನು ಆವರಿಸಿ ಉರಿದ ಪರಿಣಾಮ, ಅಂಗಡಿಯಲ್ಲಿ ಇದ್ದ ಎಲ್ಲಾ ವಸ್ತುಗಳು ಸುಟ್ಟು ಕರಕಲಾಗಿವೆ.

ಅಂಗಡಿಯಲ್ಲಿ ಸಂಗ್ರಹಿಸಿದ್ದ ಅಕ್ಕಿ, ರವೆ, ಚುರುಮುರಿ, ಸಕ್ಕರೆ, ತೊಗರಿ ಬೇಳೆ, ಅವಲಕ್ಕಿ, ಶೇಂಗಾ, ಅಡುಗೆ ಎಣ್ಣೆ, ಕುರುಕುರೆ, ತಂಪು ಪಾನೀಯಗಳು, ನೀರಿನ ಬಾಟಲಿಗಳು ಸೇರಿದಂತೆ ವಿವಿಧ ದಿನಸಿ ಸಾಮಗ್ರಿಗಳು ಹಾಗೂ ಸುಮಾರು 30 ಸಾವಿರ ನಗದು ಹಣ ಬೆಂಕಿಗಾಹುತಿಯಾಗಿದೆ. ಒಟ್ಟು ಸುಮಾರು 2.50 ಲಕ್ಷ ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ.

ಬೆಂಕಿ ಕಾಣಿಸಿಕೊಂಡ ತಕ್ಷಣ ಸ್ಥಳೀಯರು ಧಾವಿಸಿ ನಂದಿಸಲು ಪ್ರಯತ್ನಿಸಿದ್ದು, ಬಳಿಕ ಅಗ್ನಿಶಾಮಕ ದಳ ಮತ್ತು ಪೊಲೀಸ್ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಬೆಂಕಿಯನ್ನು ನಿಯಂತ್ರಣಕ್ಕೆ ತಂದರು. ಆದರೆ ಆಗಾಗಲೇ ಅಂಗಡಿಯಲ್ಲಿದ್ದ ಎಲ್ಲಾ ವಸ್ತುಗಳು ಸುಟ್ಟು ಹೋಗಿದ್ದವು.

ಘಟನಾ ಸ್ಥಳಕ್ಕೆ ತಹಶೀಲ್ದಾರ ಯರಿಸ್ವಾಮಿ ಪಿ.ಎಸ್., ಕಂದಾಯ ನಿರೀಕ್ಷಕ ಪ್ರಭು ಬಾಗಲಿ ಹಾಗೂ ಗ್ರಾಮಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಕುರಿತು ಮುಂಡರಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಉಪಾಧ್ಯಕ್ಷ ರವಿ ದೊಡ್ಡಮನಿ ಸೇರಿದಂತೆ ಗ್ರಾಮಸ್ಥರು ಸ್ಥಳಕ್ಕೆ ಭೇಟಿ ನೀಡಿ ಅಂಗಡಿ ಮಾಲೀಕೆಗೆ ಧೈರ್ಯ ತುಂಬಿದರು.

# ನಿರ್ಮಲಾ ಚಿತ್ತಾಮೂರ ಅವರಿಗೆ ರಾಷ್ಟ್ರೀಯ ಬಸವಶ್ರೀ ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ವಚನ ಟ್ರಸ್ಟ್ ಹಾಗೂ ಧಾರವಾಡದ ಚೇತನ್ ಫೌಂಡೇಶನ್ ಸಹಯೋಗದಲ್ಲಿ ದಾವಣಗೆರೆಯ ರೋಟರಿ ಸಭಾಂಗಣದಲ್ಲಿ ನಡೆದ ವರ್ಣರಂಜಿತ ಸಮಾರಂಭದಲ್ಲಿ ಗದಗಿನ ಪ್ರಾಥಮಿಕ ಶಾಲಾ ಶಿಕ್ಷಕಿ ನಿರ್ಮಲಾ ಚಿತ್ತಾಮೂರ ಅವರಿಗೆ ರಾಷ್ಟ್ರೀಯ ಬಸವಶ್ರೀ ಪ್ರಶಸ್ತಿ ಪ್ರದಾನ ಮಾಡಲಾಗಿದೆ.

ಶೈಕ್ಷಣಿಕ ಕ್ಷೇತ್ರದ ನಲಿ-ಕಲಿ ವಿಧಾನದಲ್ಲಿ ಗಣನೀಯ ಸೇವೆ ಸಲ್ಲಿಸಿರುವುದನ್ನು ಗುರುತಿಸಿ ಈ ಪ್ರಶಸ್ತಿಗೆ ಅವರನ್ನು ಆಯ್ಕೆ ಮಾಡಲಾಗಿದೆ. ಬಸವ ಜಯಂತಿಯ ಅಂಗವಾಗಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರನ್ನು ರಾಜ್ಯ ಮತ್ತು ರಾಷ್ಟ್ರಮಟ್ಟದ ಬಸವ ಚೇತನ ಹಾಗೂ ಬಸವಶ್ರೀ ಪ್ರಶಸ್ತಿಗಳೊಂದಿಗೆ ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮವನ್ನು ದಾವಣಗೆರೆ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಕೆ.ಬಿ. ಪರಮೇಶ್ವರಪ್ಪ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು. ವಚನ ವೈಭವ ಕುರಿತು ಸಾಹಿತಿ ಬಿ. ರಂಗಸ್ವಾಮಿ ಉಪನ್ಯಾಸ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪರಮೇಶ್ವರಪ್ಪ ಸಿರಗೇರಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕೂಡಲಗಿಯ ಎನ್. ಎಂ. ರವಿಕುಮಾರ, ಧಾರವಾಡದ ಎಲ್.ಐ. ಲಕ್ಕಮ್ಮನವರ ಹಾಗೂ ಬೆಂಗಳೂರಿನ ಸಾಹಿತಿ ಯಾಸ್ಮಿನ್ ಭಾನು ಬಿ. ಭಾಗವಹಿಸಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಚೇತನ್ ಫೌಂಡೇಶನ್ ಅಧ್ಯಕ್ಷ ಡಾ. ಚಂದ್ರಶೇಖರ ಮಾಡಲಗೇರಿ, ಬಸವ ಜಯಂತಿ ನಿಮಿತ್ತ ಸಾಧಕರನ್ನು ಗುರುತಿಸಿ ಸನ್ಮಾನಿಸುವುದು ಸಂಸ್ಥೆಯ ಉದ್ದೇಶವಾಗಿದ್ದು, ಮುಂದಿನ ದಿನಗಳಲ್ಲಿ ಇಂತಹ ಕಾರ್ಯಕ್ರಮಗಳನ್ನು ಎಲ್ಲ ಜಿಲ್ಲೆಗಳಲ್ಲೂ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಬಿ.ಎಡ್ ವಿದ್ಯಾರ್ಥಿಗಳಿಗಾಗಿ 'ಗುರುಸ್ಮರಣೆ-2026' ಕಾರ್ಯಕ್ರಮ

# ಎ. 24ರಂದು ಅಂತರ ಕಾಲೇಜು ಪ್ರತಿಭಾ ಸ್ಪರ್ಧೆ




■ವಿಜಯಸಾಕ್ಷಿ ಸುದ್ದಿ, ಗದಗ

ಗುರುಶ್ರೀ ಮನೋಚಾರ್ಯ ಪ್ರತಿಷ್ಠಾನ, ಚಾಲುಕ್ಯನಗರ (ಬಾಗಲಕೋಟೆ ಜಿಲ್ಲೆ) ವತಿಯಿಂದ 'ಗುರುಸ್ಮರಣೆ-2026' ಅಂಗವಾಗಿ ಅಂತರ-ಕಾಲೇಜು ಮಟ್ಟದ 'ಪ್ರತಿಭಾ' ಹಾಗೂ 'ಉಪನ್ಯಾಸ-ಸಂವಾದ' ಸ್ಪರ್ಧಾತ್ಮಕ ಕಾರ್ಯಕ್ರಮವನ್ನು ಎಪ್ರಿಲ್ 24ರಂದು ಗದಗ ನಗರದ ವಿದ್ಯಾದಾನ ಶಿಕ್ಷಣ ಸಮಿತಿಯ ಬಿ.ಎಡ್ ಕಾಲೇಜಿನಲ್ಲಿ ಆಯೋಜಿಸಲಾಗಿದೆ.

"ಈ ಸ್ಪರ್ಧೆಗಳು ವಿದ್ಯಾರ್ಥಿಗಳಿಗೆ ಭವಿಷ್ಯದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉತ್ತಮ ತರಬೇತಿಯಾಗಲಿದೆ" ಎಂದು ಆಕಾಶ್ ಮನೋಚಾರ್ಯ ತಿಳಿಸಿದರು.

ಈ ಕುರಿತು ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಪ್ರತಿಷ್ಠಾನದ ಸಂಚಾಲಕ ಆಕಾಶ್ ಮನೋಚಾರ್ಯ ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಚಾರ್ಯ ಆರ್.ಬಿ. ಸಂಕನಾಳ ವಹಿಸಲಿದ್ದು, ಉದ್ಘಾಟನೆಯನ್ನು ನಿವೃತ್ತ ಜಂಟಿ ಕಾರ್ಯದರ್ಶಿ ಕೆ.ಆರ್. ಬಡಿಗೇರ ನೆರವೇರಿಸಲಿದ್ದಾರೆ.

ಶ್ರೀ ಮೌನೇಶ್ವರ ಜೀರ್ಣೋದ್ಧಾರ ಟ್ರಸ್ಟ್ ಅಧ್ಯಕ್ಷ ವೀರಣ್ಣ ಕಾಳಪ್ಪ ಮನೋಚಾರ್ಯ ನೇತೃತ್ವ ವಹಿಸಲಿದ್ದು, ವಿಶೇಷ ಉಪನ್ಯಾಸವನ್ನು ಧಾರವಾಡದ ಸುರೇಶ್ ಕುಲಕರ್ಣಿ ನೀಡಲಿದ್ದಾರೆ.

ಕಾರ್ಯಕ್ರಮದಲ್ಲಿ ಲಿಖಿತ ಪರೀಕ್ಷೆ, ನಿಬಂಧ ಸ್ಪರ್ಧೆ, ಜಾನಪದ ಗಾಯನ, ಜಾನಪದ ಗೀತೆ ಸೇರಿದಂತೆ ಆರು ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯಲಿವೆ. ಸುಮಾರು 6 ಕಾಲೇಜುಗಳಿಂದ 2 ಸಾವಿರಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸುವ ನಿರೀಕ್ಷೆಯಿದ್ದು, ವಿವಿಧ ಜಿಲ್ಲೆಗಳ ವಿಜೇತ ವಿದ್ಯಾರ್ಥಿಗಳೂ ಭಾಗಿಯಾಗಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ರಾಜೀಬಾ ಜಗದಾಳೆ, ಅಶೋಕ ನಾಗಠಾಣೆ, ಡಾ. ವೈ.ಎಸ್. ಪಾಪಣ್ಣನವರ ಉಪಸ್ಥಿತರಿದ್ದರು.

# ಇಂದು ಉಚಿತ ಯೋಗ-ಪ್ರಕೃತಿ ಚಿಕಿತ್ಸಾ ಶಿಬಿರ




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದ ರಾಮನಗರದಲ್ಲಿರುವ ರಾಷ್ಟ್ರೋತ್ಥಾನ ವಿದ್ಯಾಕೇಂದ್ರದಲ್ಲಿ ಎಪ್ರಿಲ್ 19ರಂದು ಭಾನುವಾರ ಉಚಿತ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ರಾಷ್ಟ್ರೋತ್ಥಾನ ವಿದ್ಯಾಕೇಂದ್ರ, ಶ್ರೀ ಪತಂಜಲಿ ಯೋಗ ಸಮಿತಿ ಹಾಗೂ ಹರಪನಹಳ್ಳಿಯ ಜನನಿ ಯೋಗ ಮತ್ತು ಪ್ರಕೃತಿ ಚಿಕಿತ್ಸಾ ಆಸ್ಪತ್ರೆ ಹಾಗೂ ಸಂಶೋಧನಾ ಕೇಂದ್ರಗಳ ಸಂಯುಕ್ತ ಆಶ್ರಯದಲ್ಲಿ ಶಿಬಿರ ನಡೆಯಲಿದೆ.

"ವಿವಿಧ ಆರೋಗ್ಯ ಸಮಸ್ಯೆಗಳಿಂದ ಬಳಲುತ್ತಿರುವವರು ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು" ಎಂದು ಆಯೋಜಕರು ಮನವಿ ಮಾಡಿದ್ದಾರೆ.

ಶಿಬಿರದಲ್ಲಿ ಉಚಿತ ವೈದ್ಯಕೀಯ ಸಮಾಲೋಚನೆ, ಆಹಾರ ಸಲಹೆ, ರಕ್ತದಲ್ಲಿನ ಸಕ್ಕರೆ ತಪಾಸಣೆ, ಯೋಗ ಹಾಗೂ ಪ್ರಕೃತಿ ಚಿಕಿತ್ಸಾ ಮಾರ್ಗದರ್ಶನ, ಆಕ್ಯುಪಂಕ್ಚರ್ ಮತ್ತು ಆಕ್ಯುಪ್ರೆಶರ್ ಚಿಕಿತ್ಸೆ ಸೇರಿದಂತೆ ಹಲವು ಸೇವೆಗಳು ಲಭ್ಯವಿರುತ್ತವೆ. ಸ್ತ್ರೀರೋಗ, ಬೆನ್ನುನೋವು, ಕೀಲುನೋವು, ರಕ್ತದೊತ್ತಡ, ಬೊಜ್ಜು, ಮಧುಮೇಹ, ಥೈರಾಯ್ಡ್, ಗ್ಯಾಸ್ಟ್ರೈಟಿಸ್, ಮೈಗ್ರೇನ್, ನಿದ್ರಾಹೀನತೆ, ಉದ್ವಿಗ್ನತೆ, ಪಾರ್ಶ್ವವಾಯು, ಸ್ಪಾಂಡಿಲೈಟಿಸ್ ಸೇರಿದಂತೆ ವಿವಿಧ ಸಮಸ್ಯೆಗಳಿಗೂ ಚಿಕಿತ್ಸೆ ಹಾಗೂ ಸಲಹೆ ನೀಡಲಾಗುತ್ತದೆ.

ಕಾರ್ಯಕ್ರಮದಲ್ಲಿ ಬಸವನಗೌಡ್ರು, ಸೋಮನಗೌಡ್ರು, ವೇದಾವತಿ ಉಪ್ಪಿನ, ಡಾ. ಪೂರ್ಣಿಮಾ, ಕಮಲಮ್ಮ, ಡಾ. ರಾಜೇಶ್ ಪಾದೆಕಲ್ಲು, ಉದಯಶಂಕರ ಭಟ್ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9449177677, 8317363097 ಅನ್ನು ಸಂಪರ್ಕಿಸಬಹುದು.

# ಕಾಂಗ್ರೆಸ್ ಮಹಿಳಾ ವಿರೋಧಿ ಪಕ್ಷ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್‌ವಿಂಗಡಣೆ ಸೇರಿದಂತೆ ಸಂಸತ್ತಿನಲ್ಲಿ ಗುರುವಾರ ಪರಿಚಯಿಸಲಾದ ಮೂರು ಪ್ರಮುಖ ಮಸೂದೆಗಳ ಮೇಲಿನ ಚರ್ಚೆ ಮತ್ತು ಮತದಾನದ ಹಿನ್ನೆಲೆಯಲ್ಲಿ ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಲಾಗಿದೆ.



ಈ ಕುರಿತು ಪ್ರತಿಕ್ರಿಯಿಸಿದ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಮಹಿಳಾ ಮೀಸಲಾತಿ ವಿಧೇಯಕವನ್ನು ಇಂಡಿ ಒಕ್ಕೂಟ ಸೋಲಿಸಿರುವುದು ಮಹಿಳಾ ಹಕ್ಕುಗಳಿಗೆ ಹಿನ್ನಡೆಯಾಗಿದೆ ಎಂದು ಆರೋಪಿಸಿದರು. "ಕಾಂಗ್ರೆಸ್ ಹಲವು ವರ್ಷಗಳಿಂದ ಮಹಿಳಾ ಮೀಸಲಾತಿ ಮಸೂದೆಯ ವಿರುದ್ಧ ನಿಲುವು ತೆಗೆದುಕೊಂಡು, ದೇಶದ ಮಹಿಳಾ ಶಕ್ತಿಯನ್ನು ಹತ್ತಿಕ್ಕುವ ಕೆಲಸ ಮಾಡುತ್ತಿದೆ. ಒಟ್ಟಾರೆ ಕಾಂಗ್ರೆಸ್ ಹಾಗೂ ಇಂಡಿ ಒಕ್ಕೂಟ ಮಹಿಳಾ ವಿರೋಧಿ ಧೋರಣೆ ಹೊಂದಿವೆ" ಎಂದು ಟೀಕಿಸಿದರು.

ಮಸೂದೆಗೆ ಅಂಗೀಕಾರ ನೀಡುವಂತಹ ಅಮೂಲ್ಯ ಅವಕಾಶವನ್ನು ಸಂಸದರು ತಪ್ಪಿಸಿಕೊಳ್ಳಬಾರದು ಎಂದು ಅವರು ಅಭಿಪ್ರಾಯಪಟ್ಟರು. ಮಹಿಳೆಯರ ಹಕ್ಕುಗಳಿಗೆ ವಿರೋಧವಾಗಿ ನಿಂತವರನ್ನು ಮಹಿಳೆಯರು ಮರೆಯುವುದಿಲ್ಲ ಎಂದು ಎಚ್ಚರಿಸಿದರು.

ಪ್ರತಿಯೊಂದು ಚುನಾವಣೆಯಲ್ಲೂ ಮಹಿಳಾ ಮೀಸಲಾತಿಯನ್ನು ವಿರೋಧಿಸಿದವರನ್ನು ದೇಶದ ಮಹಿಳೆಯರು ಕ್ಷಮಿಸಿಲ್ಲ, ಮುಂದೆಯೂ ಕ್ಷಮಿಸುವುದಿಲ್ಲ ಎಂದು ಅವರು ಎಚ್ಚರಿಕೆ ನೀಡಿದರು.

# ಬಸವ ಜಯಂತಿ-ಉಪನ್ಯಾಸ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣ ಅವರ 921ನೇ ಜಯಂತಿ ಅಂಗವಾಗಿ ಉಪನ್ಯಾಸ ಕಾರ್ಯಕ್ರಮವನ್ನು ಎಪ್ರಿಲ್ 19ರಂದು ಭಾನುವಾರ ಬೆಳಿಗ್ಗೆ 10.00 ಗಂಟೆಗೆ ನಗರದ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ.

ಪ್ರತಿವಾರದಂತೆ ನಡೆಯುವ ಬಸವದಳದ 1694ನೇ ಶರಣ ಸಂಗಮದ ಅಂಗವಾಗಿ ಈ ಕಾರ್ಯಕ್ರಮ ನಡೆಯಲಿದೆ. ಬಸವದಳ, ಗದಗ-ಬೆಟಗೇರಿ ಅಧ್ಯಕ್ಷರಾದ ಶರಣ ವಿ.ಕೆ. ಕರೇಗೌಡ್ರ



ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಸರಕಾರಿ ಪದವಿ ಮಹಾವಿದ್ಯಾಲಯ, ಮುಳಗುಂದದ ಕನ್ನಡ ಪ್ರಾಧ್ಯಾಪಕರಾದ ಡಾ. ಆರ್.ಎಂ. ಕಲ್ಲನಗೌಡರ ಅವರು ಬಸವಣ್ಣನವರ ಜೀವನ ಮತ್ತು ತತ್ವಗಳ ಕುರಿತು ಉಪನ್ಯಾಸ ನೀಡಲಿದ್ದಾರೆ.

ಜಾಗತಿಕ ಲಿಂಗಾಯತ ಮಹಾಸಭೆ ಗದಗ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಶರಣೆ ಶ್ರೀದೇವಿ ಎಸ್. ಶೆಟ್ಟರ ಅವರು ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಂಘಟಕರ ಪರವಾಗಿ ಕಾರ್ಯಾಧ್ಯಕ್ಷ ಪ್ರಕಾಶ ಅಸುಂಡಿ ವಿನಂತಿಸಿದ್ದಾರೆ.

# ಅಂಧ ಬಾಲಕರ ಸರಕಾರಿ ಪಾಠಶಾಲೆಗೆ ಪ್ರವೇಶ ಆರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಅಂಧ ಬಾಲಕರ ಸರಕಾರಿ ಪಾಠಶಾಲೆಯಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಪ್ರವೇಶ ಪ್ರಕ್ರಿಯೆ ಆರಂಭಗೊಂಡಿದೆ.

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಆಡಳಿತದಲ್ಲಿರುವ ಈ ಶಾಲೆ, ಅಂಧ ಬಾಲಕರಿಗೆ ಸಂಪೂರ್ಣ ಉಚಿತ ಶಿಕ್ಷಣವನ್ನು ವಸತಿ ಸೌಲಭ್ಯ ಸಮೇತ ನೀಡುವ ವಿಶೇಷ ಸಂಸ್ಥೆಯಾಗಿದೆ. ಸುಸಜ್ಜಿತ ಕಟ್ಟಡ ಹಾಗೂ ಅಗತ್ಯ ಸೌಲಭ್ಯಗಳೊಂದಿಗೆ, ದೃಷ್ಟಿ ದೋಷ ಹೊಂದಿರುವ ವಿದ್ಯಾರ್ಥಿಗಳಿಗೆ ಅನುಕೂಲಕರ ವ್ಯವಸ್ಥೆಗಳು ಇಲ್ಲಿ ಕಲ್ಪಿಸಲಾಗಿದೆ.

2025-26ನೇ ಶೈಕ್ಷಣಿಕ ವರ್ಷದಿಂದ ಶಾಲೆಯನ್ನು ಪ್ರೌಢ ಶಾಲೆಯಾಗಿ ಉನ್ನತೀಕರಿಸಲಾಗಿದ್ದು, ಎಪ್ರಿಲ್ 16ರಿಂದ 1ರಿಂದ 10ನೇ ತರಗತಿವರೆಗೆ ಪ್ರವೇಶ ಆರಂಭಿಸಲಾಗಿದೆ ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಕೆ. ಮಹಾಂತೇಶ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9964439770 ಅನ್ನು ಸಂಪರ್ಕಿಸಬಹುದು.

# ಎ. 23ರಂದು ಭಗೀರಥ ಜಯಂತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಮಹರ್ಷಿ ಶ್ರೀ ಭಗೀರಥ ಜಯಂತಿ ಕಾರ್ಯಕ್ರಮವನ್ನು ಎಪ್ರಿಲ್ 23, 2026ರಂದು ಬೆಳಿಗ್ಗೆ 11 ಗಂಟೆಗೆ ಕರ್ನಾಟಕ ಕುಲಪುರೋಹಿತ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾಗಿದೆ.

ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ ಹಾಗೂ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕಾರ್ಮಿಕ ಇಲಾಖೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಲಾಡ್ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಶಾಸಕರಾದ ಅರವಿಂದ ಬೆಲ್ಲದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ವಿವಿಧ ಗಣ್ಯರು ಮತ್ತು ಜನಪ್ರತಿನಿಧಿಗಳು ವಿಶೇಷ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ, ಪೊಲೀಸ್ ಅಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿರಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗದಗದಲ್ಲಿ ಗೋಧಾನ-ಉಚಿತ ವಿತರಣಾ ಕಾರ್ಯಕ್ರಮ, ಗೋ ರಕ್ಷಕರಿಗೆ ಸನ್ಮಾನ

# ಮಲೆನಾಡು ಗಿಡ್ಡ ಹಸುಗಳ ಸಂರಕ್ಷಣೆಗೆ ಕರೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಸ್ವರಾಷ್ಟ್ರ ಎಂಟರ್‌ಪ್ರೈಸಸ್ ಹಾಗೂ ಮಲೆನಾಡು ಗಿಡ್ಡ ಸಂರಕ್ಷಣಾ ಮತ್ತು ಸಂವರ್ಧನ ಅಭಿಯಾನ (ಮಂಗಳೂರು) ವತಿಯಿಂದ ಗೋಧಾನ ಕಾರ್ಯಕ್ರಮದ ಅಂಗವಾಗಿ ಮಲೆನಾಡು ಗಿಡ್ಡ ತಳಿ ಹಸುಗಳ ಉಚಿತ ವಿತರಣಾ ಕಾರ್ಯಕ್ರಮ ಮತ್ತು ಗೋ ರಕ್ಷಕರಿಗೆ ಸನ್ಮಾನ ಸಮಾರಂಭ ನಡೆಯಿತು.

"ದೇಸಿ ಗಿಡ್ಡ ಹಸುಗಳ ಸಂರಕ್ಷಣೆ ಮಾಡುವುದು ಧರ್ಮ ರಕ್ಷಣೆ ಮಾಡಿದ ಪುಣ್ಯಕ್ಕೆ ಸಮಾನ. ಗೋಮಾತೆ ನಮ್ಮ ಆರೋಗ್ಯದ ರಕ್ಷಕಳು."

– ಡಾ. ಶ್ರೀ ನಿಶ್ಚಲಾನಂದನಾಥ ಮಹಾಸ್ವಾಮೀಜಿ.

ಈ ಸಂದರ್ಭದಲ್ಲಿ ದಿವ್ಯ ಸಾನ್ನಿಧ್ಯ ವಹಿಸಿದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ನಿಶ್ಚಲಾನಂದನಾಥ ಮಹಾಸ್ವಾಮೀಜಿ ಅವರು ಮಾತನಾಡಿ, ದೇಶಿ ಹಸುಗಳ ಸಂರಕ್ಷಣೆ ಅತ್ಯಂತ ಅಗತ್ಯವಾಗಿದ್ದು, ಅವು ಮಾನವನ ಆರೋಗ್ಯ ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಮಡಿವಾಳೇಶ್ವರ ಮಠದ ಶ್ರೀ ವೀರೇಶ್ವರ ಸ್ವಾಮಿಗಳು ಮಾತನಾಡಿ, ಉಚಿತವಾಗಿ ನೀಡಲಾಗುತ್ತಿರುವ ಹಸುಗಳನ್ನು ದುರುಪಯೋಗಪಡಿಸಿಕೊಳ್ಳದೆ ಜವಾಬ್ದಾರಿಯಿಂದ ಸಾಕಣೆ ಮಾಡಬೇಕು ಎಂದು ರೈತರಿಗೆ ಕರೆ ನೀಡಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಶ್ರೀ ಅಕ್ಷಯ ಆಳ್ವ ಅವರು ಮಲೆನಾಡು ಗಿಡ್ಡ ತಳಿ ಹಸುಗಳ ವೈಶಿಷ್ಟ್ಯತೆ ಹಾಗೂ ದೇಸಿ ಹಸು ಸಾಕಾಣಿಕೆಯಿಂದ ದೊರೆಯುವ ಆರೋಗ್ಯ ಹಾಗೂ ಆರ್ಥಿಕ ಲಾಭಗಳ ಕುರಿತು ವಿವರಿಸಿದರು. ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್.ವಿ. ಸಂಕನೂರ ಅವರು ಮಾತನಾಡಿ, ದೇಶಿ ಗೋಮಾತೆಯ ಪರಂಪರೆಯನ್ನು ಉಳಿಸುವುದು ಅತ್ಯವಶ್ಯಕವಾಗಿದ್ದು, ಗೋಹತ್ಯೆ ಸಂಪೂರ್ಣ ನಿಷೇಧಗೊಳ್ಳಬೇಕೆಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಪ್ರಸ್ತಾವಿಕ ನುಡಿಯನ್ನು ಸ್ವರಾಷ್ಟ್ರ ಎಂಟರ್‌ಪ್ರೈಸಸ್ ಸಹ ಮುಖ್ಯಸ್ಥರಾದ ಸಂತೋಷ ಅಕ್ಕಿ ವಹಿಸಿದರು. "ಗೋವು ಭೂಮಿಯ ಮೇಲಿನ ಪವಿತ್ರ ಜೀವಿ. ದೇಶಿ ಸಂಸ್ಕೃತಿ ಮತ್ತು ಮಣ್ಣಿನ ಫಲವತ್ತತೆಯನ್ನು ಕಾಪಾಡಲು ಮಲೆನಾಡು ಗಿಡ್ಡ ಹಸುವಿನ ಪಾತ್ರ ಮಹತ್ವದ್ದು" ಎಂದು ಹೇಳಿದರು. ಕಾರ್ಯಕ್ರಮಕ್ಕೆ ಅಧ್ಯಕ್ಷತೆಯನ್ನು ಅಶೋಕ ಅಕ್ಕಿ ವಹಿಸಿದ್ದರು. ಈ ವೇಳೆ ಉದ್ಯಮಿಗಳಾದ ದೀಪಚಂದ ಬಾಗಮಾರ, ಆರ್.ಡಿ. ಕಡ್ಲಿಕೊಪ್ಪ, ಜಗನ್ನಾಥ ಭಾಂಡಗೆ, ಕಿಚಡಿ ಕೊಟ್ರೇಶ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಕೊನೆಯಲ್ಲಿ ಮಲೆನಾಡು ಗಿಡ್ಡ ತಳಿ ಹಸುಗಳನ್ನು ಉಚಿತವಾಗಿ ಪಡೆದ ಫಲಾನುಭವಿಗಳು ಸಂತಸ ವ್ಯಕ್ತಪಡಿಸಿದರು.

# ಎಂ. ಅರವಿಂದರಿಗೆ ಜಿಲ್ಲಾ ಮಟ್ಟದ ಡಾ. ಬಿ.ಆರ್. ಅಂಬೇಡ್ಕರ್ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತ ವತಿಯಿಂದ ನೀಡಲಾಗುವ ಜಿಲ್ಲಾ ಮಟ್ಟದ ಡಾ. ಬಿ. ಆರ್. ಅಂಬೇಡ್ಕರ್ ಪ್ರಶಸ್ತಿಯನ್ನು ಸಮಾಜಸೇವಕ ಎಂ. ಅರವಿಂದ ಅವರಿಗೆ ಪ್ರದಾನ ಮಾಡಲಾಗಿದೆ.

ಧಾರವಾಡ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಶಾಲಂ ಹುಸೇನ್ ಅವರು ಪ್ರಶಸ್ತಿ ನೀಡಿ ಗೌರವಿಸಿದರು.

ಸಾಮಾಜಿಕ ನ್ಯಾಯ, ಹಿಂದುಳಿದ ವರ್ಗಗಳ ಅಭಿವೃದ್ಧಿ ಹಾಗೂ ಜನಪರ ಸೇವೆಯಲ್ಲಿ ತೊಡಗಿಸಿಕೊಂಡಿರುವ ಅವರ ಸೇವೆಯನ್ನು ಪರಿಗಣಿಸಿ ಈ ಗೌರವ ನೀಡಲಾಗಿದೆ.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



ರಾಮಗೇರಿಯಲ್ಲಿ ಜನಸಂಪರ್ಕ ಸಭೆಯಲ್ಲಿ ಲೋಕಾಯುಕ್ತ ಇನ್ಸ್‌ಪೆಕ್ಟರ್ ಕವಟಗಿ

# ಭ್ರಷ್ಟಾಚಾರ ತಡೆಗೆ ಜನರ ಸಹಕಾರ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಧಿಕಾರಿಗಳು ಜನರ ಕೆಲಸಗಳನ್ನು ಸಕಾಲಕ್ಕೆ ನಿರ್ವಹಿಸಬೇಕು. ಭ್ರಷ್ಟಾಚಾರ ತಡೆಯಲು ಜನರು ಆನ್‌ಲೈನ್ ಮೂಲಕ ವ್ಯವಹರಿಸಿ, ಧೈರ್ಯದಿಂದ ದೂರು ನೀಡಬೇಕು ಎಂದು ಗದಗ ಲೋಕಾಯುಕ್ತ ಪೊಲೀಸ್ ಇನ್ಸ್‌ಪೆಕ್ಟರ್ ಪರಮೇಶ್ವರ ಜಿ. ಕವಟಗಿ ಹೇಳಿದರು.

ತಾಲೂಕಿನ ರಾಮಗೇರಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ ಲೋಕಾಯುಕ್ತ ಜನಸಂಪರ್ಕ ಸಭೆ ಮತ್ತು ಸಾರ್ವಜನಿಕ ಅರ್ಜಿ-ಅಹವಾಲು ಸ್ವೀಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



"ಭ್ರಷ್ಟಾಚಾರ ತಡೆಯಲು ಜನರ ಸಹಕಾರ ಅತ್ಯಗತ್ಯ. ತಪ್ಪು ಕಂಡಲ್ಲಿ ಹಿಂಜರಿಯದೆ ದೂರು ನೀಡಬೇಕು" ಎಂದು ಕವಟಗಿ ಹೇಳಿದರು. ಗ್ರಾಮಗಳಲ್ಲಿನ ಗ್ರಂಥಾಲಯಗಳನ್ನು ವಿದ್ಯಾರ್ಥಿಗಳಿಗೆ ಉಪಯುಕ್ತವಾಗುವಂತೆ ಅಭಿವೃದ್ಧಿಪಡಿಸಿ, ಸ್ಪರ್ಧಾತ್ಮಕ ಪರೀಕ್ಷೆಗೆ ಸಂಬಂಧಿಸಿದ ಪುಸ್ತಕಗಳನ್ನು ಒದಗಿಸಬೇಕು ಎಂದು ಸೂಚಿಸಿದರು. ರೈತರಿಗೆ ಸರ್ಕಾರದ ಪರಿಹಾರಗಳು ಸರಿಯಾಗಿ ತಲುಪುವಂತೆ ಅಧಿಕಾರಿಗಳು ಗಮನ ಹರಿಸಬೇಕು ಎಂದರು.

ಆಯುಷ್ಮಾನ್ ಕಾರ್ಡ್‌ಗಳನ್ನು ಮಾಡಿಸುವಂತೆ ಆರೋಗ್ಯ ಇಲಾಖೆಗೆ ಸೂಚನೆ ನೀಡಿದ ಅವರು, ಅರಣ್ಯ ಇಲಾಖೆಗೆ ಸಸಿ ಸಂರಕ್ಷಣೆಯ ಬಗ್ಗೆ ಹಾಗೂ ಸಮಾಜ ಕಲ್ಯಾಣ ಇಲಾಖೆಗೆ ವಸತಿ ನಿಲಯದ ಸಮಸ್ಯೆಗಳನ್ನು ಪರಿಹರಿಸುವಂತೆ ಸೂಚಿಸಿದರು. ಹೆಸ್ಕಾಂ ಅಧಿಕಾರಿಗಳಿಗೆ ಬೇಸಿಗೆಯಲ್ಲಿ ವಿದ್ಯುತ್ ವ್ಯತ್ಯಯವಾಗದಂತೆ ನಿಗಾ ವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಗ್ರಾಮಸ್ಥರು ಹಲವು ಸಮಸ್ಯೆಗಳನ್ನು ಮುಂದಿಟ್ಟರು. ಆರೋಗ್ಯ ಇಲಾಖೆಯ ಸಿಬ್ಬಂದಿ ಗ್ರಾಮದಲ್ಲಿ ವಾಸ್ತವ್ಯ ಇರುವುದಿಲ್ಲ, ನೀರಿನ ಘಟಕಗಳು ಹಾಳಾಗಿವೆ, ಜಾನುವಾರುಗಳಿಗೆ ನೀರಿನ ತೊಟ್ಟಿಗಳಿಲ್ಲ, ಚರಂಡಿ ನೀರು

"ಅಂಗನವಾಡಿ ಹಾಗೂ ಶಾಲೆಗಳ ಸುತ್ತಮುತ್ತ ಸಸಿ ನೆಡುವ ಕಾರ್ಯ ಕೈಗೊಳ್ಳಬೇಕು. ಅವಧಿ ಮೀರಿದ ಆಹಾರ ಪದಾರ್ಥಗಳು ಕಂಡು ಬಂದರೆ ಕ್ರಮ ಕೈಗೊಳ್ಳಲಾಗುವುದು. ಮಕ್ಕಳಿಗೆ ನಿಯಮಿತ ಮೆನು ಪ್ರಕಾರ ಆಹಾರ ನೀಡಬೇಕು"

–ಪರಮೇಶ್ವರ ಕವಟಗಿ, ಇನ್ಸ್‌ಪೆಕ್ಟರ್, ಲೋಕಾಯುಕ್ತ ಪೊಲೀಸ್ ಠಾಣೆ.

"ಅಂಗನವಾಡಿ ಹಾಗೂ ಶಾಲೆಗಳ ಸುತ್ತಮುತ್ತ ಸಸಿ ನೆಡುವ ಕಾರ್ಯ ಕೈಗೊಳ್ಳಬೇಕು. ಅವಧಿ ಮೀರಿದ ಆಹಾರ ಪದಾರ್ಥಗಳು ಕಂಡು ಬಂದರೆ ಕ್ರಮ ಕೈಗೊಳ್ಳಲಾಗುವುದು. ಮಕ್ಕಳಿಗೆ ನಿಯಮಿತ ಮೆನು ಪ್ರಕಾರ ಆಹಾರ ನೀಡಬೇಕು" ಎಂದು ಲೋಕಾಯುಕ್ತ ಇನ್ಸ್‌ಪೆಕ್ಟರ್ ಕವಟಗಿ ಹೇಳಿದರು.

ಮನೆಗಳ ಬಳಿ ನಿಲ್ಲುತ್ತಿದೆ ಹಾಗೂ ತಹಸೀಲ್ದಾರ್ ಕಚೇರಿಯಲ್ಲಿ ಪ್ರಮಾಣಪತ್ರಗಳಿಗೆ ವಿಳಂಬವಾಗುತ್ತಿದೆ ಎಂದು ದೂರು ನೀಡಿದರು.

ಈ ಸಂದರ್ಭದಲ್ಲಿ ಬಸಣ್ಣ ಬೆಟಗೇರಿ, ಸಿಡಿಪಿಒ ಮೃತ್ಯುಂಜಯ ಗುಡ್ಡದನ್ವೇರಿ, ಪಿಎಸ್ಐ ನಾಗರಾಜ ಗಡದ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಪಿಡಿಒ ತನುಜಾ ಬೆನಕಟ್ಟಿ, ಗ್ರಾಪಂ ಕಾರ್ಯದರ್ಶಿ ಎಂ.ಎಚ್. ನದಾಫ, ಇಸಿಒ ರಾಘವೇಂದ್ರ ಜೋಶಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka